RNI: KARKAN\2019\78042



ಸಂಪಾದಕರು : ಸಿ.ಎನ್.ಸಮಗಂಡಿ.

# ಸತ್ಯಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

Satyamithi Kannada Daily Morning

ಚನ್ನು ಮೆನ್ಸ್‌ವೇರ್
ಕೊಳ್ಳಿಯವರ ಕ್ರಾಸ್,
ಚನ್ನು ಸ್ಟಿಚ್‌ವರ್ಲ್ಡ್
ಬಿ.ಎಸ್.ಎನ್.ಎಲ್. ಆಫೀಸ್ ಹತ್ತಿರ,
ಜೇಂಟ್ಸ್ ಸ್ಪೇಶಲಿಸ್ಟ್ ಟೇಲರ್
ಗಜೇಂದ್ರಗಡ-582114.
ಸೆಲ್ : 9986982482, 9686165708

ಹೋರಾಟಗಾರರ ಬದ್ಧತೆ, ರಾಜಿರಹಿತ ಹೋರಾಟ ನಿಜಕ್ಕೂ ಶ್ಲಾಘನೀಯ 2

ಬೇಗ ನಿರ್ಗಮಿಸಿದ ಶಾಸಕ, ಸಾರ್ವಜನಿಕರಿಂದ ಅಸಮಾಧಾನ 3

ದಕ್ಷಿಣ ಆಫ್ರಿಕಾ ಸಂಸತ್ತಿಗೆ ಕರ್ನಾಟಕ ಕುರಿತ ಕಿರುಹೊತ್ತಿಗೆ ಅರ್ಪಿಸಿದ ನಿಯೋಗ 4

ಸಂಪುಟ(Volume): 1 ಸಂಚಿಕೆ (Issue): 67 ● ಪುಟ (Page): 4 ● ದರ: Rs. 4 ಬುಧವಾರ 16 ಸೆಪ್ಟೆಂಬರ್ 2026 ● 16 SEPTEMBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ



ಹುಬ್ಬಳ್ಳಿಯ ರಾಣಿ ಚನ್ನಮ್ಮ ಮೈದಾನದಲ್ಲಿ ಪ್ರತಿಷ್ಠಾಪಿಸಿದ ಗಣೇಶ ಕಾರ್ಯಕ್ರಮದಲ್ಲಿ. ಕೇಂದ್ರ ಮಂತ್ರಿ ಪ್ರಹ್ಲಾದ್ ಜೋಶಿ, ಭಾರತ ಸರಕಾರದ ಆಹಾರ ನಿಗಮದ ರಾಜ್ಯ ಸದಸ್ಯ ರವೀಂದ್ರನಾಥ ದಂಡಿನ ರವರು ಭಜನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗಣೇಶನ ಕೃಪೆಗೆ ಪಾತ್ರರಾದರು.

## ಮೂಷಿಕ ವಾಹನಿಗೆ ಅದ್ದೂರಿ ಸ್ವಾಗತ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:** ಒಂದಡೆ ರಾಜ್ಯದಲ್ಲಿ ಬರ ಛಾಯೆಯೂ ಆವರಿಸಿದೆ, ಇನ್ನೊಂದಡೆ ಧಾರ್ಮಿಕ ಕಟ್ಟುಪಾಡು. ಇದರ ನಡುವೆ ವಿಘ್ನ ವಿನಾಷಕ, ಮೂಷಿಕ ವಾಹನನಿಗೆ ಅದ್ದೂರಿಯಾಗಿ ವೆಲಕಮ್ ಮಾಡಿಕೊಂಡಿರುವ ವಾಣಿಜ್ಯ ನಗರಿ ಗಜೇಂದ್ರಗಡ ನಗರದ ಜನತೆ.

ಗಣೇಶನ ಹಬ್ಬವನ್ನು ದುಬಾರಿಯಾದ ಕಾಲಘಟ್ಟದಲ್ಲಿಯೂ ನಮ್ಮ ಸಂಸ್ಕೃತಿ, ಸಂಪ್ರದಾಯಗಳನ್ನು ಬರದ ನಡುವೆಯೂ ಶ್ರದ್ಧಾಭಕ್ತಿಯಿಂದ ಆಚರಣೆ ಮಾಡಿದ್ದು ವಿಶೇಷವಾಗಿದೆ.

ಹಬ್ಬದ ಹಿನ್ನಲೆಯಲ್ಲಿ ಮುಂಜಾನೆಯಿಂದಲೇ ವಾಣಿಜ್ಯನಗರಿ ಕಲೆಗಟ್ಟಿದ್ದು, ಎಲ್ಲೆಲ್ಲೂ ಗಣೇಶನ್ನು ಆರಾಧನೆ ಮಾಡುವ ಗೀತೆಗಳನ್ನು ಹಾಕಿ, ಟ್ರಾಕ್ಟರ, ಟಂಟಂಗಳ, ಪಾದಯಾತ್ರೆಯ ಮೂಲಕ ಮುಂಜಾನೆಯಿಂದಲೇ ಗಣೇಶನನ್ನು ತಮ್ಮ ಮನೆಗಳಲ್ಲಿ, ಬಡಾವಣೆಯಲ್ಲಿ ಪ್ರತಿಷ್ಠಾಪನೆಯ ಮಾಡಿ ತಮ್ಮ ಭಕ್ತಿಭಾವ ಮೆರೆದಿದ್ದು ಕಂಡು ಬಂದಿತ್ತು.

ಇನ್ನೂ ವ್ಯಾಪಾರಿ ನವೀನ ಹೊನವಾಡ ಮಾತನಾಡಿ ಈ ಬಾರಿ ಬರ ಬಂದಿದೆ.ಆದರೆ ನಮ್ಮ ಆಚರಣೆಗಳಿಗೆ ಯಾವುದೇ ಬರ ಇಲ್ಲ, ನಮ್ಮ ಹಿಂದೂ ಧರ್ಮದ ಸಂಪ್ರದಾಯದ ಆಚರಣೆಯನ್ನು ಹಿರಿಯರು ಹಾಕಿ ಕೊಟ್ಟ ಮಾರ್ಗದರ್ಶನಲ್ಲಿ ನಾವೆಲ್ಲರೂ ಅಚರಣೆ ಮಾಡುತ್ತಾ ಬಂದಿದ್ದೇವೆ. ಅದರಂತೆ ಮಂದೆಯೂ ಕೂಡಾ ನಾವು ಅದನ್ನು ಪಾಲಿಸುತ್ತಾ, ಯುವ ಪೀಳಿಗೆಗೆ ಧರ್ಮದ ಕುರಿತು ಜಾಗೃತಿ ಮೂಡಿಸುವ ಕಾರ್ಯವನ್ನು ಮಾಡುತ್ತೇವೆ ಎಂದರು.



## ಮಹಿಳಾ ಮೀಸಲಾತಿ, ಕ್ಷೇತ್ರ ವಿಂಗಡಣೆ ಮಸೂದೆ ಅಂಗೀಕಾರಕ್ಕೆ ಕೇಂದ್ರ ಪ್ಲಾನ್

**ಸತ್ಯಮಿಥ್ಯ ನ್ಯೂಸ್ ಡೆಸ್ಕ್ ನವದೆಹಲಿ:** ದಸರಾ ಹಬ್ಬಕ್ಕೂ ಮುನ್ನ ಸಂಸತ್ತಿನ ವಿಶೇಷ ಅಧಿವೇಶನ ನಡೆಸಿ, ಮಹಿಳಾ ಮೀಸಲಾತಿ ಮಸೂದೆ ಮತ್ತು ಕ್ಷೇತ್ರ ಮರು-ವಿಂಗಡಣೆ ಅಂಗೀಕಾರಕ್ಕೆ ಕೇಂದ್ರ ಸರ್ಕಾರ ಪ್ಲಾನ್ ಮಾಡಿದೆ. ಈ ಸಂಬಂಧ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಕಾಂಗ್ರೆಸ್ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರನ್ನು ಸಂಪರ್ಕಿಸಿದ್ದಾರೆ ಎನ್ನಲಾಗಿದೆ.

ಕಳೆದ ಆಗಸ್ಟ್ 13 ರಂದು ಸಂಸತ್ತಿನ ಮುಂಗಾರು ಅಧಿವೇಶನವು ಅನಿರ್ದಿಷ್ಟಾವಧಿಗೆ ಮುಂದೂಡಲ್ಪಟ್ಟಿದ್ದರೂ, ರಾಷ್ಟ್ರಪತಿಗಳಿಂದ ಅಧಿಕೃತವಾಗಿ ಅಧಿವೇಶನ ಸಮಾಪ್ತಿ ಘೋಷಣೆಯಾಗಿಲ್ಲ. ಈ ಅಸಾಮಾನ್ಯ ವಿಳಂಬದ ಬೆನ್ನಲ್ಲೇ, ಬ್ರಿಕ್ಸ್ ಶೃಂಗಸಭೆ ಮುಗಿದ ಬಳಿಕ ಶೀಘ್ರದಲ್ಲೇ ಸರ್ಕಾರವು ವಿಶೇಷ ಅಧಿವೇಶನ ನಡೆಸಲು ಮುಂದಾಗಿದೆ ಎನ್ನಲಾಗಿತ್ತು.

ಅದರಂತೆ, ಸಚಿವ ಕಿರಣ್ ರಿಜಿಜು ಅವರ ಕಚೇರಿಯು ಮಲ್ಲಿಕಾರ್ಜುನ ಖರ್ಗೆ ಅವರನ್ನು ವಿಶೇಷ ಅಧಿವೇಶನಕ್ಕಾಗಿ ಸಂಪರ್ಕಿಸಿದೆ. 2026ರ ಅಕ್ಟೋಬರ್ 11 ರಂದು ನವರಾತ್ರಿ ಹಬ್ಬ ಆರಂಭವಾಗುವ ಮುನ್ನವೇ ಈ ಅಧಿವೇಶನವನ್ನು ನಡೆಸಲು ಸರ್ಕಾರ ಪ್ರಸ್ತಾಪಿಸಿದೆ ಎನ್ನಲಾಗಿದ್ದು, ಸದ್ಯಕ್ಕೆ ಖರ್ಗೆ ಅವರ ಕಚೇರಿಯಿಂದ ಯಾವುದೇ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ ಎಂದು ವರದಿಯಾಗಿದೆ.

**ವಿಶೇಷ ಅಧಿವೇಶನದ ಹಿನ್ನೆಲೆ:**
ಲೋಕಸಭೆ ಮತ್ತು ರಾಜ್ಯಸಭೆ ಎರಡನ್ನೂ ಕಳೆದ ಆಗಸ್ಟ್ 13, 2026 ರಂದು ಮಳೆಗಾಲದ ಅಧಿವೇಶನದ ಮುಕ್ತಾಯದ ನಂತರ ಅನಿರ್ದಿಷ್ಟಾವಧಿಗೆ ಮುಂದೂಡಲಾಗಿತ್ತು. ಆದರೆ, ಒಂದು ತಿಂಗಳು ಕಳೆದರೂ ರಾಷ್ಟ್ರಪತಿಗಳು ಈ ಅಧಿವೇಶನವನ್ನು ಅಧಿಕೃತವಾಗಿ ಮುಕ್ತಾಯಗೊಳಿಸಿಲ್ಲ.

ಭಾರತದ ಸಂಸದೀಯ ಇತಿಹಾಸದಲ್ಲೇ ಅಧಿವೇಶನ ಮುಂದೂಡಿಕೆ ಮತ್ತು ಅದರ ಸಂಪೂರ್ಣ ಮುಕ್ತಾಯದ ನಡುವೆ ಇಷ್ಟೊಂದು ದೀರ್ಘಾವಧಿಯ ವಿಳಂಬವಾಗಿರುವುದು ಇದೇ ಮೊದಲು ಎಂದು ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಹೇಳಿದ್ದಾರೆ.





## ಪ್ರಧಾನಿ ಮೋದಿ ಜನ್ಮದಿನದ ಅಂಗವಾಗಿ 'ಸೇವಾ ಸಂಕಲ್ಪ ಅಭಿಯಾನ'

**ಸತ್ಯಮಿಥ್ಯ ಸುದ್ದಿಮೂಲ ಬೆಂಗಳೂರು**
ಸತತ 25 ವರ್ಷಗಳಿಂದ ನಿಸ್ವಾರ್ಥ ಜನಸೇವೆಯ ಮೂಲಕ ದೇಶವನ್ನು 'ವಿಕಸಿತ ಭಾರತ'ದ ಹಾದಿಯಲ್ಲಿ ಮುನ್ನಡೆಸುತ್ತಿರುವ ವಿಶ್ವನಾಯಕ, ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಎಲ್ಲರಿಗೂ ಪ್ರೇರಣಾದಾಯಿಯಾಗಿದೆ. ಅವರ ಜನ್ಮದಿನದ ಅಂಗವಾಗಿ ಪಕ್ಷವು 'ಸೇವಾ ಸಂಕಲ್ಪ ಅಭಿಯಾನ'ವನ್ನು ಆಯೋಜಿಸಿದ್ದು, ಇದು 140 ಕೋಟಿ ಭಾರತೀಯರು ತಮ್ಮ ನೆಚ್ಚಿನ ನಾಯಕನಿಗೆ ಅರ್ಪಿಸುತ್ತಿರುವ ಕೃತಜ್ಞತೆಯ ದಿವ್ಯ ಸಂಕೇತವಾಗಿದೆ.

ಪಕ್ಷದ ಈ ಸೇವಾ ಸಂಕಲ್ಪ ಅಭಿಯಾನದ ಕುರಿತಂತೆ ಬಿಜೆಪಿ ನಿಕಟಪೂರ್ವ ರಾಷ್ಟ್ರೀಯ ಅಧ್ಯಕ್ಷ ಹಾಗೂ ಕೇಂದ್ರ ಆರೋಗ್ಯ, ಕುಟುಂಬ ಕಲ್ಯಾಣ ಮತ್ತು ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ಸಚಿವರಾದ ಜೆ.ಪಿ. ನಡ್ಡಾ ಅವರೊಂದಿಗೆ ಮಂಗಳವಾರ ಬೆಂಗಳೂರಿನ ಪಕ್ಷದ ಕಚೇರಿಯಲ್ಲಿ ಮಾಧ್ಯಮಗೋಷ್ಠಿ ನಡೆಯಿತು.

ಈ ಮಾಧ್ಯಮಗೋಷ್ಠಿಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ವಿಧಾನಸಭೆಯ ವಿಪಕ್ಷ ನಾಯಕ ಆರ್. ಅಶೋಕ, ವಿಧಾನಪರಿಷತ್ ವಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಮತ್ತು ಶಾಸಕರಾದ ಡಾ. ಸಿ.ಎನ್. ಅಶ್ವತ್ಥನಾರಾಯಣ, ಸಂಸದರುಗಳಾದ ಪಿ.ಸಿ. ಮೋಹನ್, ಡಾ. ಸಿ.ಎನ್. ಮಂಜುನಾಥ್ ಹಾಗೂ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಎನ್.ಎಸ್. ನಂದೀಶ್ ರೆಡ್ಡಿ ಸೇರಿದಂತೆ ಪ್ರಮುಖ ನಾಯಕರು ಪಾಲ್ಗೊಂಡಿದ್ದರು.

# ಅವಘಡದಲ್ಲಿ ಅನುಕೂಲಕ್ಕಾಗದ ಅಗ್ನಿಶಾಮಕ ಠಾಣೆ

### ಗಜೇಂದ್ರಗಡದಲ್ಲಿ ಲಕ್ಷಾಂತರ ಮೌಲ್ಯದ ವಸ್ತುಗಳು ಭಸ್ಮ । ಪೂರ್ಣಗೊಂಡರೂ ಉದ್ಘಾಟನೆಯಾಗದ ಅಗ್ನಿಶಾಮಕ ಠಾಣೆ । ಜನಪ್ರತಿನಿಧಿಗಳ ವಿರುದ್ಧ ಜನಾಕ್ರೋಶ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ಇಲ್ಲಿನ ವಾರ್ಡ್ ನಂಬರ್ 22ರ ಜವಳಿ ಪ್ಲಾಟ್‌ನಲ್ಲಿರುವ ಮಹೇಶ್ ಪಾಟೀಲ್ ಎಂಬುವವರ ಗೋಡೌನ್‌ನಲ್ಲಿ ಸಂಗ್ರಹಿಸಿಡಲಾಗಿದ್ದ ಪ್ಲಾಸ್ಟಿಕ್ ಪೈಪುಗಳಿಗೆ ಭಾನುವಾರ ಸಾಯಂಕಾಲ ಆಕಸ್ಮಿಕವಾಗಿ ಬೆಂಕಿ ತಗುಲಿ, ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳು ಅಗ್ನಿಗೆ ಬಲಿಯಾಗಿವೆ. ಘಟನೆಯಿಂದ ದಟ್ಟವಾದ ಹೊಗೆ ಆವರಿಸಿ ಕೆಲವೊತ್ತು ಸಾರ್ವಜನಿಕರಲ್ಲಿ ಭಯದ ವಾತಾವರಣ ನಿರ್ಮಾಣವಾಗಿತ್ತು.

ಆದರೆ ಕೋಟಿ ಕೋಟಿ ವೆಚ್ಚ ಮಾಡಿ ನಿರ್ಮಿಸಿದ ಅಗ್ನಿಶಾಮಕ ಠಾಣೆ ಇಲ್ಲೇ ಇದ್ದರೂ, ಉದ್ಘಾಟನೆ ಭಾಗ್ಯವಿಲ್ಲದೆ ಹಾಳಾಗುತ್ತಿದೆ. ಜನರು ಮಾತ್ರ ಅಮೂಲ್ಯ ವಸ್ತುಗಳು ಕಣ್ಣೆದುರೇ ಬೂದಿಯಾಗುತ್ತಿರುವುದನ್ನು ನೋಡುವ ಪರಿಸ್ಥಿತಿ ಬಂದೊದಗಿದೆ.

**30 ಕಿ.ಮೀ. ದೂರದಿಂದ ಬಂದ ವಾಹನ:** ಸ್ಥಳೀಯವಾಗಿ ಅಗ್ನಿಶಾಮಕ ಠಾಣೆಯ ನೂತನ ಕಟ್ಟಡ ಸಿದ್ಧವಾಗಿದ್ದರೂ ಉದ್ಘಾಟನೆಗೊಳ್ಳದಿರುವುದರಿಂದ. ಬೆಂಕಿ ನಂದಿಸಲು ಬಂದಿದ್ದು ಬರೋಬ್ಬರಿ 30 ಕಿಲೋಮೀಟರ್ ದೂರದ ರೋಣ ಪಟ್ಟಣದ ಅಗ್ನಿಶಾಮಕ ವಾಹನ. ಅಷ್ಟರಲ್ಲಿ ಗೋಡೌನ್‌ನಲ್ಲಿದ್ದ ವಸ್ತುಗಳೆಲ್ಲವೂ ಬೆಂಕಿಯ ಜ್ವಾಲೆಗೆ ಸಂಪೂರ್ಣವಾಗಿ ಭಸ್ಮವಾಗಿದ್ದವು.

ಈ ಕುರಿತು "ಅಗ್ನಿಶಾಮಕ ಕಟ್ಟಡಕ್ಕೆ ಯಾವಾಗ ಸಿಗುತ್ತೆ ಉದ್ಘಾಟನೆ ಭಾಗ್ಯ?" ಎಂಬ ಮಾದರಿಯಲ್ಲಿ ಬಹುತೇಕ ಮಾಧ್ಯಮಗಳಲ್ಲಿ ಈಗಾಗಲೇ ಅನೇಕ ವರದಿಗಳು ಬಿತ್ತರಗೊಂಡಿದ್ದರೂ, ಸಂಬಂಧಪಟ್ಟ ಅಧಿಕಾರಿಗಳ ಹಾಗೂ ಜನಪ್ರತಿನಿಧಿಗಳ ಕಣ್ಣು ತೆರೆದಿಲ್ಲ, ಸಮಸ್ಯೆ ಮಾತ್ರ ಹಾಗೆಯೇ ಉಳಿದುಕೊಂಡಿದೆ.

**2 ವರ್ಷಗಳ ಹಿಂದೆ ಕಾಮಗಾರಿ ಪೂರ್ಣ:** ಗಜೇಂದ್ರಗಡ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಅಗ್ನಿ ಅವಘಡ ಅಥವಾ ಪ್ರಕೃತಿ ವಿಕೋಪಗಳು ಸಂಭವಿಸಿದಾಗ ಆಗುವ ಹಾನಿಯನ್ನು ತಪ್ಪಿಸುವ ಉದ್ದೇಶದಿಂದ, ಕೊಡಗಾನೂರು ಗ್ರಾಮದ ಸರಹದ್ದಿನಲ್ಲಿರುವ ಒಂದು ಎಕರೆ ಜಾಗದಲ್ಲಿ 3 ಕೋಟಿ ರೂಪಾಯಿ ವೆಚ್ಚದಲ್ಲಿ ಅಗ್ನಿಶಾಮಕ ಠಾಣೆ ನಿರ್ಮಾಣಕ್ಕೆ ಅಂದಿನ ಶಾಸಕ ಕಳಕಪ್ಪ ಬಂಡಿ 2022ರಲ್ಲಿ ಅಡಿಗಲ್ಲು ಹಾಕಿದ್ದರು.

2024ರ ವೇಳೆಗೆ ಈ ಕಟ್ಟಡದ ಕಾಮಗಾರಿ ಸಂಪೂರ್ಣವಾಗಿ ಮುಕ್ತಾಯಗೊಂಡಿದೆ. ಕಾಮಗಾರಿ ಪೂರ್ಣಗೊಂಡು ಎರಡು ವರ್ಷಗಳು ಗತಿಸಿ, ಗೋಡೆಗೆ ಹಚ್ಚಿದ ಬಣ್ಣವೇ ಕಳೆಗುಂದುತ್ತಿದ್ದರೂ ಅಗ್ನಿಶಾಮಕ ಠಾಣೆಗೆ ಮಾತ್ರ ಕಾರ್ಯಾರಂಭದ ಭಾಗ್ಯ ಸಿಕ್ಕಿಲ್ಲ ಎಂದು ಸ್ಥಳೀಯ ಸಾರ್ವಜನಿಕರು ಹಾಗೂ ಹಲವಾರು ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇನ್ನಾದರೂ ಸ್ಥಳೀಯ ಶಾಸಕರು ಹಾಗೂ ಕರ್ನಾಟಕ ವಿಧಾನಸಭೆಯ ಅಧ್ಯಕ್ಷರಾದ ಜಿ.ಎಸ್. ಪಾಟೀಲ್ ಅವರು ತಕ್ಷಣ ಜಾಗೃತರಾಗಿ, ಈ ನೂತನ ಅಗ್ನಿಶಾಮಕ ಠಾಣೆಯ ಉದ್ಘಾಟನೆಗೆ ಶೀಘ್ರ ಕ್ರಮ ಕೈಗೊಳ್ಳಬೇಕಿದೆ. ಕಟ್ಟಡವಿದ್ದರೂ ಕತ್ತಲೆಯಲ್ಲಿರುವ ಗಜೇಂದ್ರಗಡದ ಜನತೆಗೆ ಬೆಂಕಿ ಅವಘಡಗಳಿಂದ ಶಾಶ್ವತ ಮುಕ್ತಿ ಸಿಗುವುದೇ ಎಂದು ಕಾದು ನೋಡಬೇಕಿದೆ.







ರೋಣ ಮತಕ್ಷೇತ್ರ ಸಂಪೂರ್ಣವಾಗಿ ಹಾಳುಕೊಂಪೆಯಂತಾಗಿದ್ದು. ಕಾನೂನು ಬಾಹಿರ ಚಟುವಟಿಕೆಗಳಿಗೆ ಶಾಸಕರ ಪುತ್ರ ಕುಮ್ಮಕ್ಕು ನೀಡುತ್ತಿದ್ದಾರೆ.ಗಜೇಂದ್ರಗಡ ಸೇರಿದಂತೆ ಇತ್ತೀಚಿಗೆ ಅಗ್ನಿ ಅವಘಡಗಳು ಬಹಳಷ್ಟು ಸಂಭವಿಸುತ್ತಿವೆ. ಅಗ್ನಿಶಾಮಕ ಕಟ್ಟಡ ಪೂರ್ಣಗೊಂಡು ಎರಡು ವರ್ಷಗಳೇ ಗತಿಸಿದರು ಅದಕ್ಕೆ ಉದ್ಘಾಟನೆ ಭಾಗ್ಯವಿಲ್ಲ.ಸಿಬ್ಬಂದಿ ಮತ್ತು ವಾಹನ ನೇಮಕ ಮಾಡಲು ಆಗುತ್ತಿಲ್ಲ. ಕೇವಲ ಸಚಿವಗಿರಿ ಪಡೆದುಕೊಳ್ಳುವತ್ತ ಕ್ಷೇತ್ರದ ಶಾಸಕರು ಗಮನ ಹರಿಸಿದ್ದಾರೆ. ಇನ್ನಾದರೂ ಕ್ಷೇತ್ರದ ಅಭಿವೃದ್ಧಿ ಪರ ಕೆಲಸ ಮಾಡಲಿ.

। ಅಶೋಕ ವನ್ನಾಲ, ಮುಖಂಡರು ಭಾರತೀಯ ಜನತಾ ಪಕ್ಷ



ಅಧಿಕಾರಕ್ಕೆ ಬಂದು 3 ವರ್ಷ ಕಳೆದರು ಅಗ್ನಿಶಾಮಕ ಠಾಣೆ ಉದ್ಘಾಟನೆ ಇಲ್ಲಾ, ಸಿಬ್ಬಂದಿ ಮತ್ತು ವಾಹನ ತರುವಲ್ಲಿ ಸ್ಥಳೀಯ ಶಾಸಕರು ವಿಫಲರಾಗಿದ್ದಾರೆ.ಕೇವಲ ಅಧಿಕಾರದ ಹಿಂದೆ ಬೀಳದೆ ಸಾರ್ವಜನಿಕರ ಹಿತ ಕಾಪಾಡುವಲ್ಲಿ ಕೆಲಸ ಮಾಡಬೇಕು. ಒಂದು ತಿಂಗಳಲ್ಲಿ ಅಗ್ನಿಶಾಮಕ ಠಾಣೆ ಕಾರ್ಯಾರಂಭವಾಗದಿದ್ದರೆ ಉಗ್ರಹೋರಾಟ ಮಾಡಬೇಕಾಗುತ್ತೆ.

। ಕಳಕಪ್ಪ ಪೋತಾ, ಅಧ್ಯಕ್ಷರು ಜಯಕರ್ನಾಟಕ ಜನಪರ ವೇದಿಕೆ ಗಜೇಂದ್ರಗಡ ತಾಲೂಕು



ಕೆಲವೇ ತಿಂಗಳುಗಳಲ್ಲಿ ಗಜೇಂದ್ರಗಡ ಮತ್ತು ಸುತ್ತಮುತ್ತಲಿನ ಗ್ರಾಮೀಣ ಪ್ರದೇಶದಲ್ಲಿ ಅನೇಕ ಅಗ್ನಿ ಅವಘಡಗಳು ಸಂಭವಿಸಿದ್ದು ಲಕ್ಷಾಂತರ ರೂಪಾಯಿ ಮೌಲ್ಯದ ಸಾರ್ವಜನಿಕರ ಆಸ್ತಿ ನಷ್ಟಾಗಳಾಗಿವೆ. ತುರ್ತು ಪರಿಸ್ಥಿತಿಯಲ್ಲಿ ಪ್ರತಿಯೊಂದು ನಿಮಿಷವೂ ಅತ್ಯಂತ ಅಮೂಲ್ಯ. ನಿರ್ಮಾಣಗೊಂಡ ಆಸ್ತಿ ಬಳಕೆಯಾಗದೆ ಹಾಳಾಗುವ ಮುನ್ನ ಹಾಗೂ ಮುಂದಿನ ಅನಾಹುತಗಳನ್ನು ತಡೆಯಲು ಸರ್ಕಾರ ಮತ್ತು ಜನಪ್ರತಿನಿಧಿಗಳು ತಕ್ಷಣವೇ ಈ ಅಗ್ನಿಶಾಮಕ ಠಾಣೆಯನ್ನು ಲೋಕಾರ್ಪಣೆಗೊಳಿಸಬೇಕು.

। ಮಕ್ತುಂಸಾಬ್ ಮುಧೋಳ್ (ಸಾಗರ), ಜೆಡಿಎಸ್ ಪಾರ್ಟಿ ಅಧ್ಯಕ್ಷರು ಗದಗ ಜಿಲ್ಲೆ

ಸತ್ಯ ಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ
SATYA MITHI
Kannada Daily Morning

# ಹೋರಾಟಗಾರರ ಬದ್ದತೆ, ರಾಜಿರಹಿತ ಹೋರಾಟ ನಿಜಕ್ಕೂ ಶ್ಲಾಘನೀಯ: ಪ್ರಭು ಚವಡಿ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ಜಿಗಳೂರು ರಸ್ತೆ ಅಪಘಾತದಲ್ಲಿ ಮೃತಪಟ್ಟ ಕುಟುಂಬದವರಿಗೆ ಹಾಗೂ ಗಾಯಳುಗಳಿಗೆ ಪರಿಹಾರ ಒದಗಿಸುವಲ್ಲಿ ಶ್ರಮಿಸಿದ ಹೋರಾಟಗಾರರಿಗೆ ಸಂತ್ರಸ್ತರ ಕುಟುಂಬದವರಿಂದ ಹಾಗೂ 3 ನೇ ವಾರ್ಡಿನ ಹಿರಿಯರ ನೇತೃತ್ವದಲ್ಲಿ ಅಭಿನಂದನಾ ಸಮಾರಂಭ ಜರುಗಿತು.

ಈ ವೇಳೆ ಮಾತನಾಡಿದ ಮಾಜಿ ಪುರಸಭೆ ಸದಸ್ಯ ಪ್ರಭು ಚವಡಿ, ಸಂತ್ರಸ್ತ ಕುಟುಂಬದವರ ಪರ ನಿಂತು ಪರಿಹಾರ ಒದಗಿಸಿದ ಹೋರಾಟಗಾರ ಬದ್ದತೆ, ನಿಜಕ್ಕೂ ಶ್ಲಾಘನೀಯ ನೇರ ನಿಷ್ಠೂರತೆಯೊಂದಿಗೆ, ರಾಜಿರಹಿತ ಹೋರಾಟದ ಮೂಲಕ ನೊಂದವರಿಗೆ ನ್ಯಾಯ ಒದಗಿಸಿದ್ದಾರೆ ಎಂದರು.

ಕರ್ನಾಟಕ ಪ್ರಾಂತ ರೈತ ಸಂಘದ ಕಾರ್ಯದರ್ಶಿ ಎಂ.ಎಸ್. ಹಡಪದ ಮಾತನಾಡಿ ಈ ದುರ್ಘಟನೆಯಿಂದ ದುಡಿಮೆಯನ್ನೇ ಆಧಾರವಾಗಿಸಿಕೊಂಡಿದ್ದ ಕುಟುಂಬವು ಬಡವಾಗಿದೆ. ಆಡಳಿತ ವ್ಯವಸ್ಥೆ ಸಂತ್ರಸ್ತ ಕುಟುಂಬದವರ ಕಣ್ಣೀರನ್ನು ಒರಿಸಿ ಕೊಡಬೇಕಾದ ಪರಿಹಾರವನ್ನು ಬೀದಿಗಿಳಿಸಿ ಕಣ್ಣೀರನ್ನು ಹಾಕಿಸಿ, ಕಾಡಿಸಿ,ಪಿಡಿಸಿ ಅವರನ್ನು ಅವರಿವರ ಮನೆಬಾಗಿಲಿಗೆ ಅಲೆದಾಡಿಸಿ ನೀಡಿದ ಪರಿಹಾರ ನಿಜಕ್ಕೂ ದುರಂತದ ಸಂಗತಿ ಎಂದರು. ಸಂತ್ರಸ್ತರ ಕುಟುಂಬದವರ ಜೊತೆ ಸದಾ ನಾವು ಇದ್ದೇವೆ. ಹೋರಾಟದ ಮೇಲೆ ನಂಬಿಕೆ ಇರಲಿ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ನ್ಯಾಯವಾದಿ ದಾವಲಸಾಬ ತಾಳಿಕೋಟಿ ಘಟನೆ ನಡೆದು ಆರೇಳು ತಿಂಗಳು ಗತಿಸಿದರು ಪರಿಹಾರ



ನೀಡದೇ ನಿರ್ಲಕ್ಷ್ಯ ತೋರಿದ ಸರ್ಕಾರ ಹಾಗೂ ಜನ ಪ್ರತಿನಿಧಿಗಳ ನಡೆ ಸಮಂಜಸವಲ್ಲ. ಸಂತ್ರಸ್ತ ಕುಟುಂಬದ ಪರವಾಗಿ ನಿಂತು ಹೋರಾಟ ಮಾಡುವ ಮೂಲಕ ಆ ಕುಟುಂಬದವರಿಗೆ ನ್ಯಾಯ ಒದಗಿಸುವ ಪ್ರಾಮಾಣಿಕ ಕೆಲಸ ಮಾಡಿದ್ದೇವೆ. ಆಡಳಿತ ವ್ಯವಸ್ಥೆ ಮಾನವೀಯ ನೆರವನ್ನು ತಕ್ಷಣವೇ ನೀಡಬೇಕಿತ್ತು. ಹೋರಾಟದ ಮೂಲಕ ಪರಿಹಾರ ಪಡೆದುಕೊಂಡಿದ್ದು ನಿಜಕ್ಕೂ ಬೇಸರ ಉಂಟು ಮಾಡಿದೆ. ಓಣಿಯ ಪ್ರತಿಯೊಬ್ಬರ ಸಹಕಾರ, ಶ್ರಮದಿಂದಲೇ ಹೋರಾಟಕ್ಕೆ ಜಯಸಿಕ್ಕಿದೆ ಎಂದರು.

ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಸವರಾಜ ಕೊಟಗಿ, ಬಾಲು ರಾಠೋಡ, ಪೀರು ರಾಠೋಡ ಮಾತನಾಡಿದರು.

ಇದೇ ವೇಳೆ ಮಾಜಿ ಪುರಸಭೆ ಸದಸ್ಯ ಎಂ.ಎಸ.ಹಪಡದ, ವಕೀಲರಾದ ದಾವಲಸಾಬ ತಾಳಿಕೋಟಿ, ಬಾಲು, ರಾಠೋಡ, ಪೀರು ರಾಠೋಡ, ಮೆಹಬೂಬ್ ಹವಾಲ್ದಾರ್, ಚಂದ್ರು ರಾಠೋಡ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜು ಹೊಸಮನಿ, ಪರಸಪ್ಪ ಹೊಸಮನಿ, ಶ್ರೀಧರ ಸರಗಣಾಚಾರಿ, ಬಸವರಾಜ ಹೊಸಮನಿ, ರಾಜು ಕೇಶಣ್ಣವರ, ಮೈಬು ಹುನಗುಂದ, ಮಾಸುಮಲಿ ಮದಗಾರ, ಚಂದ್ರು ಚಂಗಳಿ, ಐಹೋಳೆಪ್ಪ ಹಾಳಕೇರಿ, ಪ್ರಕಾಶ ಬಳಿಗೇರ, ವಿರೇಶ ಸರಗಣಾಚಾರಿಮಠ, ಮಂಜು ಚವ್ಹಾಣ, ವಿನಾಯಕ ಕೊಟಗಿ, ಆನಂದ ಆಲಾಪೂರ, ಚಂದ್ರು ಆಲಾಪೂರ, ರವಿ ವಡಗೇರಿ, ಪ್ರದೀಪ್ ಗೊಂಗಡಶೆಟ್ಟಿಮಠ, ಪ್ರವೀಣ ಆಲಾಪೂರ, ಗಣೇಶ ರಾಠೋಡ, ಚೆನ್ನಪ್ಪ ಗುಗಲೋತ್ತರ, ಬಸು ಸರಗಣಾಚಾರಿ, ರೇಣುಕರಾಜ ಮಡಿವಾಳರ, ಅನಿಲ ಚವಡಿ, ರವಿ ಹೊಸಮನಿ, ಅಬ್ಬು ಮದಗಾರ, ವಿನಾಯಕ ಹೊಸಮನಿ ಸೇರಿದಂತೆ ವಾರ್ಡಿನ ನಿವಾಸಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಮಾಸುಮಲಿ ಮದಗಾರ ನಿರ್ವಹಿಸಿದರು.

# ಕನಕದಾಸ ಶಿಕ್ಷಣ ಸಮಿತಿ ಎಮ್ಎಸ್‌ಡಬ್ಲ್ಯೂ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ನಗರದ ಕನಕದಾಸ ಶಿಕ್ಷಣ ಸಮಿತಿಯ (ಕೆ ಎಸ್ ಎಸ್) ಅಂಗಸಂಸ್ಥೆಯಾದ ಕನ್ನಡ ಕಿರಣ ಶಿಕ್ಷಣ ಸಮಿತಿಯ ಎಮ್ ಎಸ್ ಡಬ್ಲ್ಯೂ (ಸಮಾಜ ಕಾರ್ಯ ಸ್ನಾತಕೋತ್ತರ) ವಿಭಾಗದ 2025–26ನೇ ಸಾಲಿನ ವಿದ್ಯಾರ್ಥಿಗಳ ಬಿಳ್ಕೊಡುವ ಸಮಾರಂಭವನ್ನು ದಿನಾಂಕ 12 ಸೆಪ್ಟೆಂಬರ್ ರಂದು ಕಾಲೇಜಿನ ಸಭಾಂಗಣದಲ್ಲಿ ಅತ್ಯಂತ ವಿಜೃಂಭಣೆಯಿಂದ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸೋಮಲಿಂಗಪ್ಪ ಬೆನಕನವಾರಿ ಅವರು, "ವಿದ್ಯಾರ್ಥಿಗಳು ಸಂಸ್ಥೆಯ ಅಧ್ಯಕ್ಷರು ಕಂಡ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ನಿರಂತರವಾಗಿ ಶ್ರಮಿಸಬೇಕು. ಸಮಾಜ ಸೇವೆಯಂತಹ ಪವಿತ್ರ ಕ್ಷೇತ್ರದಲ್ಲಿ ಪದವಿ ಪಡೆಯುತ್ತಿರುವ ನೀವು ಸಮಾಜಕ್ಕೆ ಮಾದರಿಯಾಗಿ ಹೊರಹೊಮ್ಮಬೇಕು" ಎಂದು ಕರೆ ನೀಡಿದರು.

ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಸಂಕೇತಕುಮಾರ ದಂಡಿನ ಅವರು ಮಾತನಾಡಿ, "ಎಮ್ ಎಸ್ ಡಬ್ಲ್ಯೂ ಶಿಕ್ಷಣವು ಸಮಾಜದ ವಿವಿಧ ಸ್ತರಗಳಲ್ಲಿ ಸೇವೆಯನ್ನು ಸಲ್ಲಿಸಲು ಉತ್ತಮ ವೇದಿಕೆಯಾಗಿದೆ. ಪದವಿ ಮುಗಿಸಿ ಹೊರಹೋಗುತ್ತಿರುವ ಎಲ್ಲಾ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿ" ಎಂದು ಶುಭ ಹಾರೈಸಿದರು. ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಕೆ ಎಸ್ ಎಸ್ ಪದವಿ ಕಾಲೇಜಿನ ಪ್ರಾಚಾರ್ಯರಾದ ಈಶ್ವರ್ ಪಟ್ಟಣಶೆಟ್ಟರ, ಕೆ ವಿ ಎಸ್ ಆರ್ ಪ್ರೌಢಶಾಲೆಯ ಕನ್ನಡ ಶಿಕ್ಷಕರಾದ ಮಹದೇವಪ್ಪ ಬೇವಿನಕಟ್ಟಿ, ಎಮ್ ಎಸ್ ಡಬ್ಲ್ಯೂ ವಿಭಾಗದ ಸಂಯೋಜಕರಾದ ಡಾ. ವಸಂತ ಅಗಸಿಮನಿ, ಪ್ರಾಚಾರ್ಯ ಶ್ರೀಧರ್ ಕಾಂಬಳೆ ಹಾಗೂ ಉಪನ್ಯಾಸಕರಾದ ಶೋಭಾ ಬೆನಕನಾಳ ಮತ್ತು ಶ್ರೀಮತಿ ಪೂಜಾರ ಉಪಸ್ಥಿತರಿದ್ದು, ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದ ಆರಂಭದಲ್ಲಿ ಕುಮಾರಿ ಪ್ರೀತಿ ಪ್ರಾರ್ಥಿಸಿದರು. ಕುಮಾರಿ ನಿವೇದಿತಾ ಸಭೆಯನ್ನು ಸ್ವಾಗತಿಸಿದರು. ನಿರ್ಮಲಾ ಕಾರ್ಯಕ್ರಮವನ್ನು ನಿರೂಪಿಸಿದರೆ, ಅಕ್ಷತಾ ವಂದನಾರ್ಪಣೆ ಮಾಡಿದರು. ಸಂಸ್ಥೆಯ ಉಪನ್ಯಾಸಕ ವೃಂದ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



# ಅಂಗನವಾಡಿ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ

**ಸತ್ಯಮಿಥ್ಯ ಸುದ್ದಿಮೂಲ ಮುಗಳಖೋಡ:**
ಪಟ್ಟಣದ ವಾರ್ಡ್ ನಂ 1 ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಸೆ. 12 ಭಾನುವಾರರಂದು ನೂತನವಾಗಿ ನಿರ್ಮಿತವಾದ ಅಂಗವಾಗಿ ಕಟ್ಟಡ ಉದ್ಘಾಟನೆಯನ್ನು ಕುಡಚಿ ಶಾಸಕ ಮಹೇಂದ್ರ ತಮ್ಮಣ್ಣವರ ಉದ್ಘಾಟನೆ ಮಾಡಿದರು.

ಈ ಸಂದರ್ಭದಲ್ಲಿ ಪರಗೌಡ ಖೇತಗೌಡರ, ಸಿಡಿಪಿಓ ಭಾರತಿ ಕಾಂಬಳೆ, ರಮೇಶ್ ಯಡವಣ್ಣವರ, ಮುಪ್ಪಯ್ಯ ಹಿರೇಮಠ, ಕಾಂಚನಾ ದೇಸಾಯಿ, ಪ್ರದೀಪ ಹಾಲ್ಗುಣಿ, ಸಚಿನ ಹಳಕಲ್, ಅಂಗನವಾಡಿ ಎಲ್ಲ ಕಾರ್ಯಕರ್ತರು ಉಪಸ್ಥಿತರಿದ್ದರು.




# ಸಿರುಗುಪ್ಪದಲ್ಲಿ 16ರಂದು ರಾಷ್ಟ್ರೀಯ ಶಿಕ್ಷಕರ ದಿನಾಚರಣೆ

**ಸಿರುಗುಪ್ಪ:** ಭಾರತ ರತ್ನ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ 138ನೇ ಜಯಂತಿ ಹಾಗೂ ರಾಷ್ಟ್ರೀಯ ಶಿಕ್ಷಕರ ದಿನಾಚರಣೆ ಅಂಗವಾಗಿ ಸೆ.16ರಂದು ಬುಧವಾರ ಸಿರುಗುಪ್ಪ ತಾಲೂಕಿನ ಶ್ರೀಶೈಲ ಪೀಠದ ಶಿವಶಕ್ತಿ ಸಮುದಾಯ ಭವನದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕರು ಹಾಗೂ ಎನ್‌ಪಿಎಸ್ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರಾದ ಎರಪ್ಪಗೌಡ ತಿಳಿಸಿದ್ದಾರೆ.

ಕಾರ್ಯಕ್ರಮದ ಅಂಗವಾಗಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರದ ಅದ್ದೂರಿ ಮೆರವಣಿಗೆಯನ್ನು ಸಕಲ ವಾದ್ಯವೃಂದ ಹಾಗೂ ಜಾನಪದಕಲಾತಂಡಗಳೊಂದಿಗೆನಡೆಸಲಾಗುವುದು. ತಾಲೂಕಿನ ಎಲ್ಲಾ ಶಿಕ್ಷಕರು ಮೆರವಣಿಗೆ ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ನಂತರ ನಡೆಯುವ ವೇದಿಕೆ ಕಾರ್ಯಕ್ರಮವನ್ನು ಶಾಸಕಬಿ.ಎಂ.ನಾಗರಾಜ್‌ಅವರುಉದ್ಘಾಟಿಸಲಿದ್ದು, ಪ್ರಸಕ್ತ ವರ್ಷ ನಿವೃತ್ತರಾದ ಶಿಕ್ಷಕರನ್ನು ಅಭಿನಂದಿಸಿ ಸನ್ಮಾನಿಸಲಾಗುವುದು. ತಾಲೂಕಿನ 22 ಉತ್ತಮ ಶಿಕ್ಷಕರು, ಜಿಲ್ಲಾ ಉತ್ತಮ ಶಿಕ್ಷಕರು ಹಾಗೂ ಕಾರ್ಯಕ್ರಮದ ಮುಖ್ಯ ಭಾಷಣಕಾರರನ್ನು ಸಹ ಸನ್ಮಾನಿಸಲಾಗುವುದು.

ಈ ಬಾರಿ ವಿಶೇಷವಾಗಿ ತಾಲೂಕಿನ ಶಿಕ್ಷಕರಿಗಾಗಿ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಿ, ವಿಜೇತರಿಗೆ ಬಹುಮಾನ ವಿತರಿಸಲಾಗುವುದು. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಸಾಧನೆ ಮಾಡಿದ ಶಿಕ್ಷಕರ ಮಕ್ಕಳನ್ನೂ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಮನ್ವಯಾಧಿಕಾರಿಗಳು, ತಾಲೂಕು ಹಂತದ ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ವೃಂದ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಪದಾಧಿಕಾರಿಗಳು, ಬಳ್ಳಾರಿ ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರು, ಖಜಾಂಚಿ, ಸಂಘಟನಾ ಕಾರ್ಯದರ್ಶಿಗಳು ಸೇರಿದಂತೆ ಎಲ್ಲ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಎರಪ್ಪಗೌಡ ಮಾಹಿತಿ ನೀಡಿದರು.

# ಗ್ರಾಮೀಣ ಚೆಸ್ ಪ್ರತಿಭೆಗಳ ಸಾಧನೆಗೆ ಹೊಸ ಗರಿ

**ಸತ್ಯಮಿಥ್ಯ ಸುದ್ದಿಮೂಲ ಮುದ್ದೇಬಿಹಾಳ:**
ತಾಲೂಕಿನ ಕೆಪಿಎಸ್ ಸರಕಾರಿ ಆದರ್ಶ ವಿದ್ಯಾಲಯ ಬಿದರಕುಂದಿಯ ವಿದ್ಯಾರ್ಥಿಗಳು ಚೆಸ್ ಕ್ರೀಡೆಯಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ. ಚೆಸ್‌ನಂತಹ ಬೌದ್ಧಿಕ ಕ್ರೀಡೆಯಲ್ಲಿ ನಿರಂತರ ಅಭ್ಯಾಸ, ಏಕಾಗ್ರತೆ, ತಾಳ್ಮೆ ಹಾಗೂ ಸಮಯಪ್ರಜ್ಞೆಯಿಂದ ಸಾಧನೆ ಮಾಡುತ್ತಿರುವ ಈ ವಿದ್ಯಾರ್ಥಿಗಳು ಢವಳಗಿ ಗ್ರಾಮದ ವಿದ್ಯಾರ್ಥಿಗಳಾಗಿದ್ದಾರೆ. ಗ್ರಾಮೀಣ ಪ್ರತಿಭೆಗಳಿಗೆ ಉತ್ತಮ ಮಾದರಿಯಾಗಿದ್ದಾರೆ.

ಢವಳಗಿ ಗ್ರಾಮದ ಚೆಸ್ ಪ್ರತಿಭೆಗಳಾದ 10ನೇ ತರಗತಿಯ ಗೌತಮಿ ಕೊಣ್ಣೂರ್ ಅವರು ಚೆಸ್‌ನಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾಳೆ. ಎಸ್ ಜಿ ಎಫ್ ಐ ರಾಜ್ಯಮಟ್ಟದ ಚೆಸ್ ಸ್ಪರ್ಧೆಯಲ್ಲಿ 3 ಬಾರಿ ಭಾಗವಹಿಸಿರುವುದು ಹೆಮ್ಮೆಯ ಸಂಗತಿಯಾಗಿದೆ. ಅವರ ನಿರಂತರ ಸಾಧನೆ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ. 8ನೇ ತರಗತಿಯ ವಿದ್ಯಾರ್ಥಿಯಾದ ಕುಮಾರಿ ಸ್ಪಂದನಾ ಬಸವರಾಜ ಬಿರಾದಾರ್ ಮತ್ತು 7ನೇ ತರಗತಿಯ ಸುದೀಪ ಬಸವರಾಜ ಬಿರಾದಾರ ಅಕ್ಕ-ತಮ್ಮ ಇಬ್ಬರೂ




ಚೆಸ್‌ನಲ್ಲಿ ಉತ್ತಮ ಪ್ರತಿಭೆ ಹೊಂದಿದ್ದಾರೆ. ಇವರು ಕೂಡಾ ಎಸ್ ಜಿ ಎಫ್ ಐ ರಾಜ್ಯಮಟ್ಟದ ಚೆಸ್ ಸ್ಪರ್ಧೆಯಲ್ಲಿ ಒಂದೊಂದು ಬಾರಿ ಭಾಗವಹಿಸಿ ಉತ್ತಮ ಪ್ರದರ್ಶನ ನೀಡಿದ್ದಾರೆ. ಢವಳಗಿ ಗ್ರಾಮದ ಈ ಮೂವರು ವಿದ್ಯಾರ್ಥಿಗಳ ಸಾಧನೆಯ ಹಿಂದೆ ಅವರ ಪೋಷಕರ ಪ್ರೋತ್ಸಾಹ ಮತ್ತು ಶಾಲೆಯ ಶಿಕ್ಷಕರ ಮಾರ್ಗದರ್ಶನ ಪ್ರಮುಖ ಪಾತ್ರ ವಹಿಸಿದೆ. ವಿದ್ಯಾರ್ಥಿಗಳಿಗೆ ನಿರಂತರ ತರಬೇತಿ ಹಾಗೂ ಮಾರ್ಗದರ್ಶನ ನೀಡುತ್ತಿರುವ ದೈಹಿಕ ಶಿಕ್ಷಕರಾದ ನಿಂಗನಗೌಡ ಬಿರಾದಾರ್ ಮತ್ತು ಎ.ಸಿ. ಕೇರೂರ್ ಗುರುಗಳ ಪರಿಶ್ರಮ ಮೆಚ್ಚುವಂಥದ್ದಾಗಿದೆ.

ಅಷ್ಟೇ ಅಲ್ಲದೆ ವಿದ್ಯಾರ್ಥಿಗಳ ಕ್ರೀಡಾ ಚಟುವಟಿಕೆಗಳಿಗೆ ಸದಾ ಪ್ರೋತ್ಸಾಹ ನೀಡುತ್ತಿರುವ ಮುಖ್ಯ ಶಿಕ್ಷಕರಾದ ಅನಿಲ್ ಕುಮಾರ್ ರಾಠೋಡ್ ಅವರ ಸಹಕಾರಕ್ಕೆ ಪೋಷಕರು ಅಭಿನಂದನೆಗಳನ್ನು ಸಲ್ಲಿಸಿದರು.

ಗೌತಮಿ ಕೊಣ್ಣೂರ್ ಅವರ ಪೋಷಕರಾದ ಶರಣಬಸು ಕೊಣ್ಣೂರ ಹಾಗೂ ಸ್ಪಂದನಾ ಮತ್ತು ಸುದೀಪ್ ಅವರ ತಂದೆಯಾದ ಶ ಬಸವರಾಜ ಬಿರಾದಾರ ಅವರು ಮಕ್ಕಳ ಚೆಸ್ ಪ್ರತಿಭೆಗೆ ನೀಡುತ್ತಿರುವ ಪ್ರೋತ್ಸಾಹ ಮತ್ತು ಬೆಂಬಲವೂ ಪ್ರಶಂಸನೀಯವಾಗಿದೆ.

ಢವಳಗಿಯ ಈ ಮೂರು ವಿದ್ಯಾರ್ಥಿಗಳು ಚೆಸ್ ಆಟದಲ್ಲಿ ಢವಳಗಿ ಎಂಬ ಗ್ರಾಮೀಣ ಪ್ರದೇಶದಿಂದ ರಾಜ್ಯಮಟ್ಟದ ವೇದಿಕೆಯವರೆಗೆ ಭಾಗವಹಿಸಿದ್ದಾರೆ. ಈ ಪ್ರತಿಭಾವಂತ ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಇನ್ನಷ್ಟು ಉನ್ನತ ಸಾಧನೆ ಮಾಡಲಿ ಎಂಬುದು ಶಾಲೆಯ ಅಭಿಲಾಷೆಯಾಗಿದೆ ಎಂದು ಕೆಪಿಎಸ್ ಸರಕಾರಿ ಆದರ್ಶ ವಿದ್ಯಾಲಯ ಬಿದರಕುಂದಿ ಶಾಲೆಯ ಮುಖ್ಯ ಶಿಕ್ಷಕರಾದ ಅನಿಲ ರಾಠೋಡ ಅವರು ಆಶಿಸಿದರು.

# ದೇವರು ವಿಮರ್ಶೆ ಕೃತಿ ಬಿಡುಗಡೆ ಮಾಡಿದ ಚೆನ್ನಬಸವಣ್ಣ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ:**
ತಾಲೂಕು ಸಭಾಂಗಣದಲ್ಲಿ ರಾಜು ತೇರದಾಳ ರಚಿಸಿದ ದೇವರು ವಿಮರ್ಶೆ ಕೃತಿ ಬಿಡುಗಡೆ ಮಾಡಿದ ಲೋಹಿಯಾ ಪ್ರಕಾಶನದ ಚೆನ್ನಬಸವಣ್ಣ ಎ.ಎನ್. ಮೂರ್ತಿರಾವ್ ತೀರಿ ಹೋಗಿದ್ದರೂ ಅವರನ್ನು ನೆನೆಸುವ ಕಾರ್ಯ ಕೊಪ್ಪಳದಲ್ಲಿ ನಡೆದಿದೆ.

ದೇವರ ಬಗ್ಗೆ ನಿರಂತರ ಚರ್ಚೆ ನಡೆದಿದೆ. ಜಿ. ಎಸ್. ಶಿವರುದ್ರಪ್ಪ ಎಲ್ಲೋ ಹುಡುಕಿದೆ ಇಲ್ಲದ ದೇವರ ಕಲ್ಲು ಮಣ್ಣುಗಳ ಗುಡಿಯೊಳಗೆ ಎಂದಿದ್ದಾರೆ. ಚಿತೆ-ಗೂ ಚಿಂತೆಗೂ ಸೊನ್ನೆಯ ವ್ಯತ್ಯಾಸವಿದ್ದರೂ ಚಿಂತೆ ಇದ್ದರೆ ಚಟ್ಟ ಬೇಗನೆ ಏರಬೇಕಾಗುತ್ತದೆ. ಕಲೆ, ಸಾಹಿತ್ಯ ಎರಡರಲ್ಲೂ ರಾಜು ತೇರದಾಳ್ ಅವರಿಗೆ ಗತಿಯಿದೆ. ಸಂಯಮದಿಂದ ದೇವರು ಕೃತಿ ರಚನೆ ಮಾಡಿದ್ದಾರೆ ಎಂದು ಹೇಳಿದರು.

ಸಾಹಿತಿ ಶರಣಬಸಪ್ಪ ಬಿಳಿಯೆಲೆ ಮಾತನಾಡಿ ವೈಚಾರಿಕತೆ ನಿಂತಲ್ಲಿಂದ ಮುಂದೆ ಸಾಗಬೇಕು. ವೈಚಾರಿಕತೆ ಮತ್ತು ಆಧ್ಯಾತ್ಮ ಸೇರಬೇಕು. ಕೆಲವು ವಿಜ್ಞಾನಿಗಳು ದೇವರನ್ನು ನಂಬುತ್ತಾರೆ. ಈ ವಿಮರ್ಶಾ ಕೃತಿಯಲ್ಲಿ ಎಲ್ಲಿಯೂ ಎ. ಎನ್. ಮೂರ್ತಿರಾವ್ ಕುರಿತು ಕೆಟ್ಟದಾಗಿ ಬರೆದಿಲ್ಲ ಎಂದು ದೇವರು ಕೃತಿ ಬಿಡುಗಡೆ ಸಂದರ್ಭದಲ್ಲಿ ಮಾತನಾಡಿದರು.

ಶಂಭುಲಿಂಗನ ಗೌಡ ಮಾತನಾಡಿ ತೆರೆದ ಮನಸ್ಸಿನ ತೇರದಾಳ ಮನೆ ಕಂಪೌಂಡ್ ಮೇಲೆ ದೇವರ ಚಿತ್ರ ಬಿಡಿಸಿದ್ದಾರೆ. ಎ.ಎನ್. ಮೂರ್ತಿ ರಾವ್ ಅವರ




ದೇವರು ಕೃತಿ ಕುರಿತು ವಿಮರ್ಶೆ ಮಾಡಿದ್ದಾರೆ. ನಾನು ರಾಜ್ಯದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷನಾಗಿ ಕಾರ್ಯ ಮಾಡಲು ಸಾಧ್ಯವಾಯಿತು. ನಾನು ಬೆಳೆದು ಬರಲು ಗುರುಗಳು ಕಾರಣ ಎಂದರು.

'ಆರಂಭ ಮಾಡುವೆ ಗುರುಪೂಜೆಗೆಂದು' ಬಸಣ್ಣನವರ ವಚನ :ಪರಶುರಾಮ ಬಣ್ಣದ ಸಂಗೀತ ಕಲಾವಿದರು ಕೊಪ್ಪಳ. ದೇವರು ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ತಂಡದೊಂದಿಗೆ ಹಾಡಿದರು. ಕಾರ್ಯಕ್ರಮದಲ್ಲಿ ಬಂಡಾಯ ಸಾಹಿತಿ ಅಲ್ಲಮಪ್ರಭು ಬೆಟ್ಟದೂರು, ಕೃತಿ ರಚನಾಕಾರ ರಾಜು ತೇರದಾಳ ಮುಂತಾದವರು ಇದ್ದರು.

# ಪಿಎಂ ಕಿಸಾನ್ ಇ-ಕೆವೈಸಿ ಕಡ್ಡಾಯ; ಕೂಡಲೇ ಮಾಡಿಸಿಕೊಳ್ಳಲು ಸಲಹೆ

**ಸತ್ಯಮಿಥ್ಯ ಸುದ್ದಿಮೂಲ ಗದಗ**
ಪಿಎಂ ಕಿಸಾನ್ ಯೋಜನೆಯಡಿ ನಕಲಿ ಫಲಾನುಭವಿಗಳನ್ನು ತಡೆದು, ಪಾರದರ್ಶಕವಾಗಿ ಹಣ ಜಮಾ ಮಾಡಲು ಹಾಗೂ ಮುಂದಿನ ಕಂತಿನ ಹಣ ಪಡೆಯಲು ಕೇಂದ್ರ ಸರ್ಕಾರ ಬಯೋ ಮೆಟ್ರಿಕ್, ಫೇಸ್ ಆಧಾರಿತ ಇ-ಕೆವೈಸಿಯನ್ನು ಕಡ್ಡಾಯಗೊಳಿಸಿದೆ. ಇ-ಕೆವೈಸಿ ಬಾಕಿ ಇರುವ ರೈತರು ಕೂಡಲೇ ಮಾಡಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಇ-ಕೆವೈಸಿ ಮಾಡಿಸದಿದ್ದರೆ ಮುಂದಿನ ಕಂತಿನ ಹಣದಿಂದ ವಂಚಿತರಾಗಬೇಕಾಗುತ್ತದೆ. ಯೋಜನೆಯ 24ನೇ ಕಂತಿನ ಹಣ ಅಕ್ಟೋಬರ್ ತಿಂಗಳಲ್ಲಿ ಬಿಡುಗಡೆಯಾಗಲಿದೆ. ಕೇಂದ್ರ ಸರ್ಕಾರದ ಈ ಯೋಜನೆಯಡಿ ಪ್ರತಿ 4 ತಿಂಗಳಿಗೊಮ್ಮೆ 2,000 ರೂ. ನಂತೆ ವಾರ್ಷಿಕವಾಗಿ 3 ಕಂತುಗಳಲ್ಲಿ 6,000 ರೂ. ನೇರ ನಗದು ವರ್ಗಾವಣೆ ಮೂಲಕ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿದೆ.

ನೇರ ನಗದು ವರ್ಗಾವಣೆ ಮೂಲಕ ರೈತರ ಖಾತೆಗೆ ಹಣ ಸೇರುತ್ತಿದ್ದರೂ ಈ ಬಾರಿ ಕಂತು ಬಿಡುಗಡೆಗೆ ಕೇಂದ್ರ ಸರ್ಕಾರ ಮಾರ್ಗಸೂಚಿ ಬಿಡುಗಡೆ ಮಾಡಿದೆ. ಬ್ಯಾಂಕ್ ಖಾತೆಗೆ ಆಧಾರ್ ಕಾರ್ಡ್ ನ್ನು ಎನ್ ಪಿಸಿಐ ಜತೆ ಲಿಂಕ್ ಮಾಡಿಸಿದ್ದರೂ ಈ ಸಲ ಪ್ರತಿಯೊಬ್ಬ ಫಲಾನುಭವಿ ಬಯೋಮೆಟ್ರಿಕ್ ಅಥವಾ ಫೇಸ್ ಆಧಾರಿತ ಇ-ಕೆವೈಸಿ ಮಾಡಿಸಬೇಕು. ಈ ಮೂಲಕ ಮೃತರನ್ನು ಕೈಬಿಟ್ಟು ಅರ್ಹ ಫಲಾನುಭವಿಗಳ ಪಟ್ಟಿಗೆ ಸರ್ಕಾರ ಮುಂದಾಗಿದೆ.

ಈ ಹಿಂದೆ ರೈತರು ಆಧಾರ್ ಒಟಿಪಿ ಆಧಾರಿತ ಇ-ಕೆವೈಸಿ ಮಾಡಿಸುತ್ತಿದ್ದರು. ಇದರಿಂದ ಮೃತಪಟ್ಟ ಖಾತೆದಾರರ ಅಥವಾ ಫಲಾನುಭವಿಗಳ ಖಾತೆಗೂ ಹಣ ವರ್ಗಾವಣೆಗೊಂಡ ಪ್ರಕರಣಗಳು ಬೆಳಕಿಗೆ ಬಂದಿರುತ್ತದೆ. ಹೀಗಾಗಿ ಕೇಂದ್ರ ಸರ್ಕಾರ ಬಯೋಮೆಟ್ರಿಕ್ ಅಥವಾ ಫೇಸ್ ಆಧಾರಿತ ಇ-ಕೆವೈಸಿಗೆ ಮಾತ್ರ ಅವಕಾಶ ನೀಡಿ, ಒಟಿಪಿ ಆಧಾರಿತ ಇ-ಕೆವೈಸಿಗೆ ಕಡಿವಾಣ ಹಾಕಿದೆ.

ರೈತರು ಸಾಮಾನ್ಯ ಸೇವಾ ಕೇಂದ್ರಗಳು, ಗ್ರಾಮ ಒನ್, ಕರ್ನಾಟಕ ಒನ್




ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಬಯೋಮೆಟ್ರಿಕ್ ನಿಂದ ಇ-ಕೆವೈಸಿ ಪೂರ್ಣಗೊಳಿಸಬಹುದು. ಮುಖ ದೃಢೀಕರಣ ಆಧಾರಿತ ಇ-ಕೆವೈಸಿ ಮಾಡಿಸಿಕೊಳ್ಳಲು ಪ್ರತಿ ಗ್ರಾಮದ ವಿಎನಒ, ನೋಡಲ್ ಅಧಿಕಾರಿ, ಕೃಷಿ ಸಖಿ, ಹಾಗೂ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬಹುದು ಹಾಗೂ ರೈತರು ಸ್ವತಃ ಪಿಎಂ ಕಿಸಾನ್ ಮೊಬೈಲ್ ಅಪ್ಲಿಕೇಶನ್ ಮೂಲಕ ಇ-ಕೆವೈಸಿ ಮಾಡಿಕೊಳ್ಳಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಶ್ರೀಮತಿ ಚೇತನಾ ಪಾಟೀಲ ತಿಳಿಸಿದ್ದಾರೆ.

# ಬೇಗ ನಿರ್ಗಮಿಸಿದ ಶಾಸಕ, ಸಾರ್ವಜನಿಕರಿಂದ ಅಸಮಾಧಾನ

**ಸತ್ಯಮಿಥ್ಯ ಸುದ್ದಿಮೂಲ ಬಾಗಲಕೋಟೆ**

ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ಸರ್ಕಾರದ ವಿವಿಧ ಸೇವೆಗಳನ್ನು ಜನರ ಬಳಿಗೆ ತಲುಪಿಸುವ ಉದ್ದೇಶದಿಂದ ಆಯೋಜಿಸಿದ್ದ 'ಪ್ರಜಾಸೇವಾ ಆಂದೋಲನ–ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ' ಕಾರ್ಯಕ್ರಮದಲ್ಲಿ 150ಕ್ಕೂ ಅಧಿಕ ಅರ್ಜಿಗಳು ಸಲ್ಲಿಕೆಯಾಗಿದ್ದು, ಸಾರ್ವಜನಿಕರ ಸಮಸ್ಯೆಗಳ ಪ್ರಮಾಣ ಮತ್ತೊಮ್ಮೆ ಬೆಳಕಿಗೆ ಬಂದಿದೆ.

ಜಮಖಂಡಿ ತಾಲೂಕಿನ ಸಾವಳಗಿ ಗ್ರಾಮದ ಶ್ರೀ ಚನ್ನಪ್ಪಣ್ಣ ನಿಂಗಪ್ಪ ನಿರಾಣಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ನಡೆದ ಕಾರ್ಯಕ್ರಮವನ್ನು ಜಮಖಂಡಿ ಶಾಸಕ ಜಗದೀಶ ಗುಡಗುಂಟಿ ಉದ್ಘಾಟಿಸಿದರು. ಸಾರ್ವಜನಿಕರ ಸಮಸ್ಯೆಗಳಿಗೆ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಿ, ಅರ್ಜಿಗಳನ್ನು ಆದ್ಯತೆಯ ಮೇರೆಗೆ ವಿಲೇವಾರಿ ಮಾಡಬೇಕು ಎಂದು ಅವರು ಕರೆ ನೀಡಿದರು.

ಆದರೆ, ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಬಳಿಕ ಶಾಸಕ ಜಗದೀಶ ಗುಡಗುಂಟಿ ಅವರು ಸುಮಾರು 10 ನಿಮಿಷದಲ್ಲೇ ವೇದಿಕೆಯಿಂದ ನಿರ್ಗಮಿಸಿದ್ದು, ಸಾರ್ವಜನಿಕರ ಕುಂದುಕೊರತೆಗಳನ್ನು ಖುದ್ದಾಗಿ ಆಲಿಸಿ ಅಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಬೇಕಿದ್ದ ಜನಪ್ರತಿನಿಧಿಯವರು ಕಾರ್ಯಕ್ರಮದಿಂದ ಶೀಘ್ರ ನಿರ್ಗಮಿಸಿರುವುದು ಸಾರ್ವಜನಿಕ ವಲಯದಲ್ಲಿ ಅಸಮಾಧಾನಕ್ಕೆ ಕಾರಣವಾಯಿತು.




**ವ್ಯವಸ್ಥೆಯಲ್ಲೂ ಅಸ್ತವ್ಯಸ್ತತೆ:** ಇದು ಮೊದಲ ಕಾರ್ಯಕ್ರಮವಾಗಿದ್ದರಿಂದ ಅರ್ಜಿ ಸ್ವೀಕಾರ ಹಾಗೂ ಇಲಾಖಾವಾರು ವ್ಯವಸ್ಥೆಯಲ್ಲಿ ಕೆಲವೆಡೆ ಅಸ್ತವ್ಯಸ್ತತೆ ಕಂಡುಬಂತು. ಕೆಲ ಇಲಾಖೆಗಳ ಅರ್ಜಿ ಸ್ವೀಕರಿಸಲು ಸಂಬಂಧಿಸಿದ ಸಿಬ್ಬಂದಿ ಸ್ಥಳದಲ್ಲಿ ಕಾಣಿಸದಿರುವುದು ಸಾರ್ವಜನಿಕರ ಗಮನಕ್ಕೆ ಬಂತು. ಇನ್ನೂ ಕೆಲವು ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಯನ್ನು ಕಳುಹಿಸಿ, ತಾವು ಸ್ಥಳದಲ್ಲಿ ಹಾಜರಾಗದಿರುವುದರಿಂದ ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ತೊಂದರೆ ಅನುಭವಿಸಿದರು.

ಕಾರ್ಯಕ್ರಮದಲ್ಲಿ ಸ್ವೀಕರಿಸಲಾದ ಅರ್ಜಿಗಳ ಪೈಕಿ ಹೆಚ್ಚಿನವು ಕಂದಾಯ ಇಲಾಖೆಗೆ ಸಂಬಂಧಿಸಿದ ಪೋಡಿ, ಪಟ್ಟಾ ತಿದ್ದುಪಡಿ, ವಾರಸಾ ಬದಲಾವಣೆ, ಹಕ್ಕು ಬದಲಾವಣೆ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತಾಗಿದ್ದವು. ಇವುಗಳಲ್ಲಿ ಕೆಲವು ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಮಾರ್ಗದರ್ಶನ ಅಥವಾ ಪ್ರಾಥಮಿಕ ಪರಿಹಾರ ನೀಡಬಹುದಾಗಿದ್ದರೂ, ನಿರೀಕ್ಷಿತ ಮಟ್ಟದಲ್ಲಿ ಕ್ರಮ ಕೈಗೊಳ್ಳಲಿಲ್ಲ ಎಂಬ ಅಸಮಾಧಾನ ಸಾರ್ವಜನಿಕರಿಂದ ವ್ಯಕ್ತವಾಯಿತು. ಬೆಳಿಗ್ಗೆ 11.30ಕ್ಕೆ ಆರಂಭವಾದ ಕಾರ್ಯಕ್ರಮ ಮಧ್ಯಾಹ್ನ 3 ಗಂಟೆ ವೇಳೆಗೆ ಮುಕ್ತಾಯಗೊಂಡಿತು. ಸಮಯದ ಅಭಾವ ಹಾಗೂ ವ್ಯವಸ್ಥೆಯ ಕೊರತೆಯಿಂದಾಗಿ ಹಲವು ಅರ್ಜಿಗಳು ವೇದಿಕೆಯಲ್ಲಿ ಚರ್ಚೆಗೆ ಬಾರದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಯಿತು, ಕೆಲವು ಇಲಾಖೆಗಳ ಅಧಿಕಾರಿಗಳು ಸಾಮಾನ್ಯ ಉತ್ತರ ನೀಡಿದರೇ ಹೊರತು, ಸ್ಥಳದಲ್ಲಿಯೇ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಹೆಚ್ಚಿನ ಪ್ರಯತ್ನ ನಡೆಯಲಿಲ್ಲ ಎಂಬ ಆರೋಪವೂ ಕೇಳಿಬಂತು.

**15 ದಿನಗಳಲ್ಲಿ ಅರ್ಜಿ ವಿಲೇವಾರಿಗೆ ಸೂಚನೆ:** ಕಾರ್ಯಕ್ರಮದಲ್ಲಿ ಮಾತನಾಡಿದ ಜಮಖಂಡಿ ತಹಶೀಲ್ದಾರ್ ಅನೀಲ ಬಡಿಗೇರ, ಸಾರ್ವಜನಿಕರಿಂದ ಸ್ವೀಕರಿಸುವ ಪ್ರತಿಯೊಂದು ಅರ್ಜಿಯನ್ನು ಸಂಬಂಧಿಸಿದ ಅಧಿಕಾರಿಗಳು ಗಂಭೀರವಾಗಿ ಪರಿಶೀಲಿಸಿ, ಅರ್ಜಿ ಸ್ವೀಕರಿಸಿದ 15 ದಿನಗಳೊಳಗಾಗಿ ಅರ್ಜಿದಾರರಿಗೆ ತೃಪ್ತಿಯಾಗುವ ರೀತಿಯಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಸಾರ್ವಜನಿಕರು ತಮ್ಮ ಸಮಸ್ಯೆಗಳಿಗೆ ಪರಿಹಾರ ದೊರೆಯುತ್ತದೆ ಎಂಬ ವಿಶ್ವಾಸದಿಂದ ಅರ್ಜಿ ಸಲ್ಲಿಸುತ್ತಾರೆ. ಹೀಗಾಗಿ ಪ್ರತಿಯೊಂದು ಅರ್ಜಿಯ ಹಿಂದಿರುವ ಸಮಸ್ಯೆಯನ್ನು ಅರ್ಥಮಾಡಿಕೊಂಡು, ಅರ್ಜಿದಾರರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದರು. ಮುಂದಿನ ಹಂತದಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಪ್ರಜಾಸೇವಾ ಆಂದೋಲನವನ್ನು ಮುಂದುವರಿಸಲಾಗುವುದು. ಎಲ್ಲ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರ ಅರ್ಜಿಗಳಿಗೆ ಪ್ರಾಮುಖ್ಯತೆ ನೀಡಿ, ನಿಗದಿತ ಅವಧಿಯೊಳಗೆ ವಿಲೇವಾರಿ ಮಾಡಬೇಕು ಎಂದು ತಿಳಿಸಿದರು.

**ಆಂದೋಲನದಲ್ಲಿ ಸದ್ದು ಮಾಡಿದ ಸಿಜೇರಿಯನ್ ಹೆರಿಗೆ ಆರೋಪ:** ಕಾರ್ಯಕ್ರಮದಲ್ಲಿ ಸಾಮಾಜಿಕ ಹಾಗೂ ಮಾಹಿತಿ ಹಕ್ಕು ಕಾರ್ಯಕರ್ತರ ವೇದಿಕೆ ಜಮಖಂಡಿ ತಾಲ್ಲೂಕು ಅಧ್ಯಕ್ಷ ಸಿದ್ದು ಬಂಡಿವಡ್ಡರ ಅವರು ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದ ಗಂಭೀರ ಆರೋಪಗಳನ್ನು ಪ್ರಸ್ತಾಪಿಸಿದರು. ಜಮಖಂಡಿ ತಾಲ್ಲೂಕಿನಾದ್ಯಂತ ಕೆಲವು ಮೆಡಿಕಲ್‌ಗಳು ಹಾಗೂ ಕ್ಲಿನಿಕ್‌ಗಳು ನಿಯಮಬಾಹಿರವಾಗಿ ಕಾರ್ಯನಿರ್ವಹಿಸುತ್ತಿವೆ. ಕೆಲವೆಡೆ ಅಧಿಕೃತ ಬಿಲ್ ನೀಡುತ್ತಿಲ್ಲ ಎಂಬ ಆರೋಪಗಳಿದ್ದು, ಸಂಬಂಧಿಸಿದ ಇಲಾಖೆಗಳು ಪರಿಶೀಲನೆ ನಡೆಸಬೇಕು ಎಂದು ಅವರು ಒತ್ತಾಯಿಸಿದರು. ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಬರುವ ಕೆಲವು ಗರ್ಭಿಣಿಯರಿಗೆ ಹೆರಿಗೆ ಸಂದರ್ಭದಲ್ಲಿ ತಾಯಿ ಹಾಗೂ ಮಗುವಿನ ಜೀವಕ್ಕೆ ಅಪಾಯವಿದೆ ಎಂದು ಭಯದ ವಾತಾವರಣ ಸೃಷ್ಟಿಸಿ, ಸಿಜೇರಿಯನ್ ಹೆರಿಗೆಗಾಗಿ ಖಾಸಗಿ ಆಸ್ಪತ್ರೆಗಳಿಗೆ ಕಳುಹಿಸಲಾಗುತ್ತಿದೆ ಎಂಬ ಗಂಭೀರ ಆರೋಪವನ್ನೂ ಅವರು ಮಾಡಿದರು. ಕೆಲವು ಆಶಾ ಕಾರ್ಯಕರ್ತೆಯರು ಗರ್ಭಿಣಿಯರನ್ನು ಖಾಸಗಿ ಹೆರಿಗೆ ಆಸ್ಪತ್ರೆಗಳಿಗೆ ಕರೆದೊಯ್ದು ₹1,000ರಿಂದ ₹2,000ರವರೆಗೆ ಕಮಿಷನ್ ಪಡೆಯುತ್ತಾರೆ ಎಂಬ ಆರೋಪ ಕೇಳಿಬರುತ್ತಿದ್ದು, ಈ ಬಗ್ಗೆ ಸಮಗ್ರ ತನಿಖೆ ನಡೆಸಬೇಕು ಎಂದು ಸಿದ್ದು ಬಂಡಿವಡ್ಡರ ಆಗ್ರಹಿಸಿದರು.

ಇದಲ್ಲದೆ, ಆಯುರ್ವೇದ ಪದ್ಧತಿಯಲ್ಲಿ ನೋಂದಾಯಿಸಿಕೊಂಡಿರುವ ಕೆಲವು ವೈದ್ಯರು ಅಲೋಪತಿ ಚಿಕಿತ್ಸೆ ನೀಡುತ್ತಿದ್ದಾರೆ ಹಾಗೂ ರೋಗಿಗಳನ್ನು ತಮ್ಮ ಕ್ಲಿನಿಕ್‌ಗಳಲ್ಲಿ ದಾಖಲಿಸಿಕೊಂಡು ಹೆಚ್ಚಿನ ಮೊತ್ತದ ಬಿಲ್ ವಿಧಿಸಿದರೂ ಅಧಿಕೃತ ರಸೀದಿ ನೀಡುತ್ತಿಲ್ಲ ಎಂಬ ಆರೋಪಗಳನ್ನು ಅವರು ಪ್ರಸ್ತಾಪಿಸಿದರು. ಇಂತಹ ಕ್ಲಿನಿಕ್‌ಗಳು ಹಾಗೂ ಆಸ್ಪತ್ರೆಗಳ ಕಾರ್ಯವೈಖರಿಯನ್ನು ಆರೋಗ್ಯ ಇಲಾಖೆ ಪರಿಶೀಲಿಸಿ, ಆರೋಪಗಳು ಸತ್ಯವೆಂದು ದೃಢಪಟ್ಟರೆ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಸಾರ್ವಜನಿಕರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

## ನುಲಿಯ ಚಂದಯ್ಯ ಸೇವಾ ಸಂಘ ಉದ್ಘಾಟನೆ, ರಂಗೋಲಿ ಸ್ಪರ್ಧೆ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**

ನಗರದಲ್ಲಿನ ಭಜಂತ್ರಿ ಓಣಿಯಲ್ಲಿ ಸೋಮವಾರ ಶ್ರೀ ನೂಲಿಯ ಚಂದಯ್ಯ ಸೇವಾ ಸಂಘ (ರಿ) ಉದ್ಘಾಟನಾ ಸಮಾರಂಭ ಹಾಗೂ ಗಜಾನನೋತ್ಸವದ ಅಂಗವಾಗಿ ರಂಗೋಲಿ ಸ್ಪರ್ಧೆ ಅತ್ಯಂತ ವೈಭವದಿಂದ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಶ್ರೀ ನೂಲಯ್ಯ ಚಂದಯ್ಯ ಸೇವಾ ಸಂಘದ ಅಧ್ಯಕ್ಷ ರವಿಚಂದ್ರ ಭಜಂತ್ರಿ ಅವರು, ಸಮಾಜದ ಸರ್ವಾಂಗೀಣ ಅಭಿವೃದ್ಧಿ, ಒಗ್ಗಟ್ಟು ಮತ್ತು ಯುವಜನತೆಯಲ್ಲಿ ಧಾರ್ಮಿಕ ಹಾಗೂ ಸಾಂಸ್ಕೃತಿಕ ಅರಿವು ಮೂಡಿಸುವಲ್ಲಿ ಇಂತಹ ಸೇವಾ ಸಂಘಟನೆಗಳ ಪಾತ್ರ ಅತ್ಯಂತ ಪ್ರಮುಖವಾದದ್ದು ಎಂದು ಪ್ರತಿಪಾದಿಸಿದರು.

ನಮ್ಮ ಸಮಾಜದ ಯುವಕರು ಸಂಘಟಿತರಾಗಿ ಶಿಕ್ಷಣ, ರಕ್ಷಣೆ ಮತ್ತು ಸಾಮಾಜಿಕ ಸೇವೆಗಳಲ್ಲಿ ಮುಂಚೂಣಿಗೆ ಬರಬೇಕು. ಶ್ರೀ ನೂಲಯ್ಯ ಚಂದಯ್ಯನವರ ಉನ್ನತ ವಿಚಾರಗಳು ಮತ್ತು ಸಮಾಜಮುಖಿ ಚಿಂತನೆಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದ ಪ್ರತಿಯೊಂದು ಕುಟುಂಬದ ಕಷ್ಟಸುಖಗಳಿಗೆ ಸ್ಪಂದಿಸುವ ಹಾಗೂ ಯುವಜನತೆಗೆ ಸೂಕ್ತ ಮಾರ್ಗದರ್ಶನ ನೀಡುವ ನಿಟ್ಟಿನಲ್ಲಿ ನಮ್ಮ ಸೇವಾ ಸಂಘವು ಮುಂದಿನ ದಿನಗಳಲ್ಲಿ ಹಲವಾರು ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ. ಈ ಕಾರ್ಯಕ್ಕೆ ಸಮಾಜದ ಪ್ರತಿಯೊಬ್ಬ ಹಿರಿಯರ ಆಶೀರ್ವಾದ ಹಾಗೂ ಯುವಕರ ಸಕ್ರಿಯ ಸಹಕಾರ ಅಗತ್ಯ, ಎಂದು ಅವರು ಕರೆ ನೀಡಿದರು.

ಸಮಾರಂಭವನ್ನು ಭಜಂತ್ರಿ ಸಮಾಜದ ಹಿರಿಯರಾದ ನಾಗಪ್ಪ ಭಜಂತ್ರಿ ,ಕಾಶಪ್ಪ ಭಜಂತ್ರಿ, ಮುತ್ತಣ್ಣ ಭಜಂತ್ರಿ, ಬಸವರಾಜ ಭಜಂತ್ರಿ (ಹೊಸಳ್ಳಿ) ಹಾಗೂ ಭಜಂತ್ರಿ ಸಮಾಜದ ತಾಲೂಕು ಅಧ್ಯಕ್ಷರಾದ ಅನಿಲ ಭಜಂತ್ರಿ ಅವರು ಜಂಟಿಯಾಗಿ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸವನ್ನು ಶಿಕ್ಷಕ ಹನುಮಂತ ಭಜಂತ್ರಿ ಅವರು, ನೂಲಯ್ಯ ಚಂದಯ್ಯನವರ ತತ್ವಾದರ್ಶ ಹಾಗೂ ಸಮಾಜಮುಖಿ ಚಿಂತನೆಗಳ ಕುರಿತು ಬೆಳಕು ಚೆಲ್ಲಿದರು.

ಕಾರ್ಯಕ್ರಮದಲ್ಲಿ ನಿವೃತ್ತ ರೈಲ್ವೆ ಪೊಲೀಸ್ ಅಧಿಕಾರಿ ಸುರೇಶ ಭಜಂತ್ರಿ, ನಿವೃತ್ತ ಶಿಕ್ಷಕ ನಾರಾಯಣಪ್ಪ ಭಜಂತ್ರಿ, ಶಿಕ್ಷಕರಾದ ಅಶೋಕ ಭಜಂತ್ರಿ ಸೇರಿದಂತೆ ಸಮಾಜದ ಹಿರಿಯರಾದ ಯಮುನೂರಪ್ಪ ಭಜಂತ್ರಿ (ಚಿಕ್ಕಳಗುಂದಿ), ತಮ್ಮಣ್ಣ ಭಜಂತ್ರಿ, ಸತ್ಯಪ್ಪ ಭಜಂತ್ರಿ, ಬಸವರಾಜ ಭಜಂತ್ರಿ, ಹನುಮಂತಪ್ಪ ಯಮುನಪ್ಪ ಭಜಂತ್ರಿ, ಈರಪ್ಪ ಭಜಂತ್ರಿ, ಮಹಾಂತೇಶ ಭಜಂತ್ರಿ, ಶ್ರೀಕಾಂತ ಭಜಂತ್ರಿ ಹಾಗೂ ಕಾರವಾರ, ಗುಳೇದಗುಡ್ಡ, ಸೂಡಿ, ಗೂಡೂರ ಮೊದಲಾದ ಭಾಗಗಳಲ್ಲಿನ ಭಜಂತ್ರಿ ಸಮಾಜದ ಪ್ರಮುಖರು ಮತ್ತು ಸ್ಥಳೀಯ ಸಾರ್ವಜನಿಕರು ಅಪಾರ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಗಜಾನನೋತ್ಸವದ ನಿಮಿತ್ತ ಏರ್ಪಡಿಸಲಾಗಿದ್ದ ರಂಗೋಲಿ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಭಾವನಾ ಭಜೇಂತ್ರಿ, ದ್ವಿತೀಯ ಬಹುಮಾನ ಐಶ್ವರ್ಯ ಭಜೇಂತ್ರಿ, ತೃತೀಯ ಬಹುಮಾನ ನಿರ್ಮಾಲ ನಿಡಗುಂದಿ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಸಂಘದ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು. ಸಂಘದ ಕಾರ್ಯದರ್ಶಿ ಅಶೋಕ ಭಜಂತ್ರಿ ಕಾರ್ಯಕ್ರಮ ನಿರೂಪಿಸಿದರು.




## ನಾಲ್ವರು ಸಜೀವ ದಹನ

### ಅಗ್ನಿ ಅವಘಡಕ್ಕೆ ಒಂದೇ ಕುಟುಂಬದ ನಾಲ್ವರು ಮಹಿಳೆಯರ ಸಾವು

**ಸತ್ಯಮಿಥ್ಯ ಸುದ್ದಿಮೂಲ ಬೆಳಗಾವಿ**

ನಗರದ ಚಾವ್ಹಾಟ್ ಗಲ್ಲಿಯಲ್ಲಿ (ಚಾವ್ಹಾಣ್ ಗಲ್ಲಿ) ಗಣೇಶ ಚತುರ್ಥಿಯ ದಿನವೇ ತಡರಾತ್ರಿ ಭೀಕರ ಅಗ್ನಿ ಅವಘಡ ಸಂಭವಿಸಿದ್ದು, ಒಂದೇ ಕುಟುಂಬದ ನಾಲ್ವರು ಮಹಿಳೆಯರು ಸಜೀವ ದಹನವಾಗಿ, ಇಬ್ಬರು ಗಂಭೀರವಾಗಿ ಗಾಯಗೊಂಡಿರುವ ದಾರುಣ ಘಟನೆ ನಡೆದಿದೆ.

ರಾತ್ರಿ ಊಟ ಮಾಡಿ ಕುಟುಂಬಸ್ಥರು ಗಾಢ ನಿದ್ರೆಯಲ್ಲಿದ್ದಾಗ ಮನೆಯಲ್ಲಿ ಶಾರ್ಟ್ ಸರ್ಕ್ಯೂಟ್ ನಿಂದ ದಿಢೀರನೆ ಬೆಂಕಿ ಕಾಣಿಸಿಕೊಂಡಿದೆ. ಕ್ಷಣಾರ್ಧದಲ್ಲೇ ಇಡೀ ಮನೆಗೆ ಬೆಂಕಿ ವ್ಯಾಪಿಸಿದ್ದು, ಈ ವೇಳೆ ಫ್ರಿಡ್ಜ್ ಸ್ಫೋಟಗೊಂಡು ಬೆಂಕಿ ಮತ್ತಷ್ಟು ವ್ಯಾಪಿಸಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ನಿದ್ರೆಯಲ್ಲಿದ್ದ ಕುಟುಂಬಸ್ಥರಿಗೆ ತಪ್ಪಿಸಿಕೊಳ್ಳಲು ಸಾಧ್ಯವಾಗದೆ ಬೆಂಕಿಯ ಕೆನ್ನಾಲಿಗೆಗೆ ಸಿಲುಕಿ ನಾಲ್ವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಮೃತರ ವಿವರ:

ಗಜಾನನ ರಾಜಾರಾಮ ದಮೋನೆ (65), ಶರದಾ ದಮೋನೆ (45), ಪ್ರಿಯಾ ಗಜಾನನ ದಮೋನೆ (28), ಗಂಗಾ ಗಜಾನನ (25) ದುರಂತದಲ್ಲಿ ಗಂಭೀರವಾಗಿ ಗಾಯಗೊಂಡಿರುವ ಮತ್ತಿಬ್ಬರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.



## ನಿಮ್ಮ ಗ್ರಾಮದಲ್ಲಿ ಕೆಲಸ ಬೇಕೇ? ಗ್ರಾಪಂನಲ್ಲಿ ಫಾರ್ಮ್ ನಂ.6 ಸಲ್ಲಿಸಿ

**ಸತ್ಯಮಿಥ್ಯ ಸುದ್ದಿಮೂಲ ರೋಣ**

ಗ್ರಾಮದಲ್ಲೇ ಕೆಲಸ ಸಿಗಲಿ, ಕೂಲಿಗಾಗಿ ದೂರದ ಊರುಗಳಿಗೆ ಅಲೆಯುವ ಪರಿಸ್ಥಿತಿ ತಪ್ಪಲಿ ಎಂಬ ಉದ್ದೇಶದಿಂದ ರೋಣ ತಾಲೂಕಿನ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಫಾರ್ಮ್ ನಂ.6 ಉದ್ಯೋಗ ಬೇಡಿಕೆ ಅಭಿಯಾನ ಹಮ್ಮಿಕೊಳ್ಳಲಾಗಿದೆ. ವಿಬಿ–ಜಿ ರಾಮ್ (ಜಿ) ಯೋಜನೆಯಡಿ ಉದ್ಯೋಗ ಪಡೆಯಲು ಇಚ್ಛಿಸುವ ಗ್ರಾಮೀಣ ಕುಟುಂಬಗಳು ತಮ್ಮ ಗ್ರಾಮ ಪಂಚಾಯಿತಿಗೆ ತೆರಳಿ ಫಾರ್ಮ್ ನಂ.6 ಮೂಲಕ ಕೆಲಸದ ಬೇಡಿಕೆ ಸಲ್ಲಿಸಬಹುದಾಗಿದೆ.



**ಕೆಲಸದ ಅಗತ್ಯವಿರುವವರು ಗ್ರಾಮ ಪಂಚಾಯಿತಿಗೆ ತೆರಳಿ ಅರ್ಜಿ ಸಲ್ಲಿಸಬೇಕು. ಸ್ವೀಕರಿಸುವ ಅರ್ಜಿಗಳನ್ನು ಪರಿಶೀಲಿಸಿ ಅರ್ಹರಿಗೆ ನಿಯಮಾನುಸಾರ ಉದ್ಯೋಗ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು."**

**। ಚಂದ್ರಶೇಖರ ಬಿ. ಕಂದಕೂರ, ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯಿತಿ, ರೋಣ**

ಹೊಸ ಯೋಜನೆಯಡಿ ಗ್ರಾಮೀಣ ಕುಟುಂಬಗಳಿಗೆ ಉದ್ಯೋಗದ ಅವಕಾಶ ಕಲ್ಪಿಸುವ ಪ್ರಕ್ರಿಯೆ ಆರಂಭವಾಗಿರುವ ಹಿನ್ನೆಲೆಯಲ್ಲಿ, ಅರ್ಹ ಫಲಾನುಭವಿಗಳನ್ನು ಗುರುತಿಸಿ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಈ ಅಭಿಯಾನ ಕೈಗೊಳ್ಳಲಾಗಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಉದ್ಯೋಗದ ಅಗತ್ಯವಿರುವ ಕುಟುಂಬಗಳು ತಪ್ಪದೇ ಅರ್ಜಿ ಸಲ್ಲಿಸುವಂತೆ ತಾಲೂಕು ಪಂಚಾಯಿತಿಯಿಂದ ಸೂಚಿಸಲಾಗಿದೆ.

ಫಾರ್ಮ್ ನಂ.6 ಮೂಲಕ ಅರ್ಜಿ ಸಲ್ಲಿಸಿದ ಬಳಿಕ ಗ್ರಾಮ ಪಂಚಾಯಿತಿ ಅಧಿಕಾರಿಗಳು ಅರ್ಜಿಯನ್ನು ಪರಿಶೀಲಿಸಿ, ಅರ್ಹ ಕುಟುಂಬಗಳ ವಿವರಗಳನ್ನು ದಾಖಲಿಸಿಕೊಳ್ಳಲಿದ್ದಾರೆ. ಬಳಿಕ ಲಭ್ಯವಿರುವ ಕಾಮಗಾರಿಗಳ ಆಧಾರದ ಮೇಲೆ ಉದ್ಯೋಗ ನೀಡುವ ಕ್ರಮ ಕೈಗೊಳ್ಳಲಾಗುತ್ತದೆ. ಹೀಗಾಗಿ ಕೆಲಸದ ಅವಶ್ಯಕತೆ ಇರುವವರು ಕೇವಲ ಉದ್ಯೋಗ ಚೀಟಿ ಹೊಂದಿರುವುದಷ್ಟೇ ಅಲ್ಲದೆ, ಕೆಲಸದ ಬೇಡಿಕೆಯನ್ನೂ ಅಧಿಕೃತವಾಗಿ ಸಲ್ಲಿಸುವುದು ಅಗತ್ಯವಾಗಿದೆ.

ಈ ಹಿಂದೆ ನರೇಗಾ ಯೋಜನೆಯಡಿ ಜಾಬ್‌ಕಾರ್ಡ್ ಹೊಂದಿದ್ದ ಕುಟುಂಬಗಳಿಗೂ ಹೊಸ ಯೋಜನೆಯಡಿ ಉದ್ಯೋಗ ಪಡೆಯಲು ಅವಕಾಶವಿದೆ. ಈ–ಕೆವೈಸಿ ಪೂರ್ಣಗೊಂಡಿರುವ ಹಳೆಯ ಉದ್ಯೋಗ ಚೀಟಿಗಳನ್ನು ಆರಂಭಿಕ ಹಂತದಲ್ಲಿ ಮಾನ್ಯಗೊಳಿಸಲಾಗಿದ್ದು, ಅವುಗಳ ಆಧಾರದಲ್ಲಿ ಅರ್ಹ ಕಾರ್ಮಿಕರಿಗೆ ಕೆಲಸ ಕಲ್ಪಿಸುವ ಪ್ರಕ್ರಿಯೆ ನಡೆಯಲಿದೆ. ಹೊಸದಾಗಿ ಉದ್ಯೋಗ ಬಯಸುವ ಕುಟುಂಬಗಳಿಗೂ ನೋಂದಣಿ ಮಾಡಿಕೊಳ್ಳಲು ಅವಕಾಶವಿದೆ.

ಗ್ರಾಮ ಪಂಚಾಯಿತಿಗಳಲ್ಲಿ ಕುಟುಂಬಗಳ ನೋಂದಣಿ, ಫಾರ್ಮ್ ನಂ.6 ಸ್ವೀಕಾರ, ದಾಖಲೆಗಳ ಪರಿಶೀಲನೆ ಹಾಗೂ ಉದ್ಯೋಗ ಒದಗಿಸುವ ಪ್ರಕ್ರಿಯೆ ಸಮರ್ಪಕವಾಗಿ ನಡೆಯುವಂತೆ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚಿಸಲಾಗಿದೆ. ಯಾವುದೇ ಅರ್ಹ ಕುಟುಂಬವೂ ಉದ್ಯೋಗದ ಅವಕಾಶದಿಂದ ವಂಚಿತವಾಗದಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಾಹಿತಿ ನೀಡುವ ಹಾಗೂ ಅರ್ಜಿಗಳನ್ನು ಸ್ವೀಕರಿಸುವ ಕಾರ್ಯಕ್ಕೆ ಆದ್ಯತೆ ನೀಡಲಾಗಿದೆ.

ಯೋಜನೆಯಡಿ ದಿನಕ್ಕೆ 382 ಕೂಲಿ ನಿಗದಿಯಾಗಿದ್ದು, ಅರ್ಹ ಗ್ರಾಮೀಣ ಕುಟುಂಬಗಳಿಗೆ ವರ್ಷದಲ್ಲಿ 125 ದಿನಗಳವರೆಗೆ ಉದ್ಯೋಗದ ಅವಕಾಶ ಕಲ್ಪಿಸುವ ಉದ್ದೇಶ ಹೊಂದಲಾಗಿದೆ. ಜಲಸಂರಕ್ಷಣೆ, ಗ್ರಾಮೀಣ ಮೂಲಸೌಕರ್ಯ, ಜೀವನೋಪಾಯ ಹಾಗೂ ಹವಾಮಾನಕ್ಕೆ ಸಂಬಂಧಿಸಿದ ವಿವಿಧ ಕಾಮಗಾರಿಗಳಲ್ಲಿ ಸ್ಥಳೀಯ ಕಾರ್ಮಿಕರಿಗೆ ಕೆಲಸ ನೀಡಲು ಅವಕಾಶವಿದೆ.

ಕೃಷಿ ಕೆಲಸ ಲಭ್ಯವಿಲ್ಲದ ಅವಧಿಯಲ್ಲಿ ಗ್ರಾಮದಲ್ಲಿಯೇ ಉದ್ಯೋಗ ಸಿಗುವುದರಿಂದ ಗ್ರಾಮೀಣ ಕುಟುಂಬಗಳ ಆದಾಯಕ್ಕೆ ನೆರವಾಗುವುದರ ಜೊತೆಗೆ, ಉದ್ಯೋಗಕ್ಕಾಗಿ ನಗರ ಹಾಗೂ ಹೊರ ಜಿಲ್ಲೆಗಳಿಗೆ ವಲಸೆ ಹೋಗುವ ಪ್ರಮಾಣ ಕಡಿಮೆಯಾಗುವ ನಿರೀಕ್ಷೆಯೂ ಇದೆ.

"ಗ್ರಾಮೀಣ ಭಾಗದ ಅರ್ಹ ಕುಟುಂಬಗಳಿಗೆ ಸ್ಥಳೀಯವಾಗಿಯೇ ಉದ್ಯೋಗ ಒದಗಿಸುವ ಉದ್ದೇಶದಿಂದ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಫಾರ್ಮ್ ನಂ.6 ಮೂಲಕ ಉದ್ಯೋಗ ಬೇಡಿಕೆ ಸಲ್ಲಿಸುವ ಅಭಿಯಾನ ಹಮ್ಮಿಕೊಳ್ಳಲಾಗಿದೆ.

## ಕಲ್ಯಾಣ ಕರ್ನಾಟಕಕ್ಕೆ ಹೊಸ ಜಿಲ್ಲೆಗಳ ಸೇರ್ಪಡೆಗೆ ವಿರೋಧ

**ಸತ್ಯಮಿಥ್ಯ ಸುದ್ದಿಮೂಲ ಕುಷ್ಟಗಿ:**

'ಕಲ್ಯಾಣ ಕರ್ನಾಟಕದ ಪ್ರದೇಶಾಭಿವೃದ್ಧಿ ಮಂಡಳಿಯು ಇಲ್ಲಿನ ಜನರ ಜೀವನಮಟ್ಟ ಸುಧಾರಣೆಗೆ ಅನುದಾನ ಬಳಕೆ ಮಾಡದಿರುವುದು ನಮ್ಮ ಭಾಗ ಹಿಂದುಳಿಯಲು ಕಾರಣ' ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ರಾಜ್ಯ ಉಪಾಧ್ಯಕ್ಷ ರಜಾಕ್ ಉಸ್ತಾದ್ ಹೇಳಿದರು.

ಪಟ್ಟಣದಲ್ಲಿ ಭಾನುವಾರ ನಡೆದ ಪದವಿಪೂರ್ವ ಕಾಲೇಜುಗಳ ಪ್ರಾಚಾರ್ಯರ, ಉಪನ್ಯಾಸಕರ ಹಾಗೂ ನೌಕರರ ಜಿಲ್ಲಾ ಮಟ್ಟದ 4ನೇ ಶೈಕ್ಷಣಿಕ ಸಮ್ಮೇಳನದಲ್ಲಿ 371ಜೆ ಅನುಷ್ಠಾನ ಸಮಸ್ಯೆ ಹಾಗೂ ಸವಾಲುಗಳು ವಿಷಯದ ಕುರಿತು ಅವರು ಮಾತನಾಡಿದರು.

'ಡಿ.ಎಂ.ನಂಜುಂಡಪ್ಪ ವರದಿ ಪ್ರಕಾರ 15 ವರ್ಷಗಳಲ್ಲಿ 31,630ಕೋಟಿ ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಖರ್ಚು ಮಾಡಲಾಗಿದೆ. ಇನ್ನಷ್ಟು ಅನುದಾನ ಇದ್ದರೂ ಬಳಕೆಯಾಗಿಲ್ಲ' ಎಂದು ಬೇಸರ ವ್ಯಕ್ತಪಡಿಸಿದರು.

'2024–25ನೇ ಸಾಲಿನ ವರದಿ ಪ್ರಕಾರ ಮೈಸೂರು ವಿಭಾಗದ ತಲಾ ಆದಾಯ ಏರುಗತಿಯಲ್ಲಿದ್ದರೆ, ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ತೀರಾ ಕಡಿಮೆ ಇದೆ. ಇದನ್ನೆಲ್ಲ ನೋಡಿದರೆ ಪ್ರದೇಶಾಭಿವೃದ್ಧಿ ಮಂಡಳಿ ಏನು ಮಾಡಬೇಕು ಎಂಬುದನ್ನು ಆತ್ಮಾವಲೋಕನ ಮಾಡಬೇಕಿದೆ' ಎಂದರು.

'ಐದು ವರ್ಷಗಳ ಹಿಂದೆ ಚಿತ್ರದುರ್ಗ ಕಲ್ಯಾಣ ಕರ್ನಾಟಕದಲ್ಲಿ ಸೇರಿಸಬೇಕೆನ್ನುವ ಕೂಗು ಎದ್ದಾಗ ಅವರಿಗೆ ವಾಸ್ತವ ತಿಳಿ ಹೇಳಿದಾಗ ಆ ಜಿಲ್ಲೆಯವರು ಸುಮ್ಮನಾಗಿದ್ದಾರೆ. ಈಗ ವಿಜಯಪುರ ಜಿಲ್ಲೆಯವರು ಶುರು ಮಾಡಿದ್ದಾರೆ. ಯಾವುದೇ ಕಾರಣಕ್ಕೂ ಕಲ್ಯಾಣ ಕರ್ನಾಟಕದ ಈಗಿನ ಜಿಲ್ಲೆಗಳನ್ನು ಹೊರತುಪಡಿಸಿದರೆ, ಅನ್ಯ ಜಿಲ್ಲೆಗಳ ಸೇರ್ಪಡೆಗೆ ವಿರೋಧವಿದೆ' ಎಂದರು. ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ ಮಾತನಾಡಿ, 'ಪಿಯು ಓದುವ ವಿದ್ಯಾರ್ಥಿಗಳು ಜೀವನದ ಮೌಲ್ಯ ಅರ್ಥ ಮಾಡಿಕೊಳ್ಳಬೇಕು. ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳು ಸಮಾಜದ ಸತ್ಪ್ರಜೆ ತಯಾರಿಸುವ ಚಿಂತನೆಗಳು ಸಮ್ಮೇಳನದಲ್ಲಿ ಚರ್ಚೆಯಾಗಬೇಕು' ಎಂದರು. ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ, ರಾಜ್ಯ ಪದವಿಪೂರ್ವ ಕಾಲೇಜು ಪೂರ್ವ ಉಪನ್ಯಾಸಕರ ಸಂಘದ ಗೌರವಾಧ್ಯಕ್ಷ ತಿಮ್ಮಯ್ಯ.ಪಿ., ಜಿಲ್ಲಾಧ್ಯಕ್ಷ ಸೋಮಶೇಖರಗೌಡ, ಪ್ರಮುಖರಾದ ರಾಜಶೇಖರ ಪಾಟೀಲ, ಜಗದೀಶ.ಎಚ್., ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ನಾಗರಾಜ ಜುಮ್ಮಣ್ಣನವರ, ವೆಂಕಟೇಶ ಎಸ್.ಆರ್, ಶರಣಗೌಡ ಪಾಟೀಲ, ಪ್ರಿಯದರ್ಶಿನಿ, ಸುಭಾಸ್ ಗೌಡ್ರು, ಕೆ.ಎಸ್ ಹುಲಿ, ಸಿದ್ದಪ್ಪ ಮೇಳಿ, ಈಶಪ್ಪ ಮಳಗಿ, ಬಸಪ್ಪ ನಾಗೋಲಿ, ಉಪನ್ಯಾಸಕರ ಸಂಘದ ರಾಜ್ಯ ಕಾರ್ಯದರ್ಶಿ ಭೀಮಪ್ಪ ಗೊಲ್ಲರ, ಪ್ರಾಚಾರ್ಯರ ಸಂಘದ ಕಾರ್ಯದರ್ಶಿ ಬಸವರಾಜ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು



ಸತ್ಯಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ
SATY MITHI
Kannada Daily Morning

# ಮತದಾನದ ಹಕ್ಕು ಪ್ರಜಾಪ್ರಭುತ್ವದ ರಕ್ಷಣೆಗೆ ಇರುವ ಪ್ರಬಲ ಅಸ್ತ್ರ: ಶಾಸಕ ಎಚ್.ಕೆ. ಪಾಟೀಲ

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ಪ್ರಜಾಪ್ರಭುತ್ವದ ರಕ್ಷಣೆಗೆ ಮತದಾನದ ಹಕ್ಕು ಪ್ರಬಲ ಅಸ್ತ್ರವಾಗಿದೆ. ಸಂವಿಧಾನದ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಶಾಸಕ ಡಾ.ಎಚ್.ಕೆ.ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಮಂಗಳವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಸಮಾಜ ಕಲ್ಯಾಣ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾದಿಕಾರ ಇವರ ಸಹಯೋಗದಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಮತದಾನದಹಕ್ಕುಉಳಿದರೆಮಾತ್ರಪ್ರಜಾಪ್ರಭುತ್ವಶಕ್ತಿಯಾಲಿಯಾಗುತ್ತದೆ. ಸಂವಿಧಾನದ ಪೀಠಿಕೆಯಂತೆ ಸರ್ವರು ಬದುಕನ್ನು ನಡೆಸಬೇಕು. ಪ್ರಜಾಪ್ರಭುತ್ವದ ಕುರಿತು ಜಾಗೃತಿ ಮೂಡಿಸುವುದಕ್ಕೋಸ್ಕರವೇ ಈ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಪ್ರತಿಯೊಬ್ಬರಿಗೂ ಸಮಾನವಾದ ಅವಕಾಶ, ಸ್ಥಾನಮಾನ ದೊರಕುಬೇಕು. ಬಡತನವನ್ನು ಬೇರು ಸಹಿತ ಕಿತ್ತೋಗೆಯುವಲ್ಲಿ ಯಶಸ್ವಿಯಾಗಿದ್ದೇವೆ ಆದರೂ ಸಹಿತ ಅಸ್ಪೃಶ್ಯತೆಯನ್ನು ಕಿತ್ತೋಗೆಯಲು ಸಾಧ್ಯವಾಗಿಲ್ಲ. ಸರ್ಕಾರವು ಜಗಜ್ಯೋತಿ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದೆ. ಅನುಭವ ಮಂಟಪವೇ ಮೊದಲ ಸಂಸತ್ತಾಗಿದೆ. ಸಂವಿಧಾನ ಮತ್ತು ಬಸವೇಶ್ವರ ವಚನಗಳಲ್ಲಿ ಸಾಮ್ಯತೆಯನ್ನು ಕಾಣುತ್ತೇವೆ. ಪ್ರಜಾಪ್ರಭುತ್ವ ಕಾಪಾಡಿಕೊಂಡು ಬಲಿಷ್ಟ ರಾಷ್ಟ್ರವಾಗಿ ನಮ್ಮ ದೇಶ ಬೆಳೆಯಲು ಸಂವಿಧಾನವೇ ಕಾರಣವಾಗಿದೆ. ಜಗತ್ತಿನಲ್ಲಿಯೇ ಬಲಿಷ್ಟ ಪ್ರಜಾಪ್ರಭುತ್ವ ಹೊಂದಿದ ರಾಷ್ಟ್ರ ನಮ್ಮ ದೇಶವಾಗಿದೆ. ಸಂವಿಧಾನವನ್ನು ಗೌರವಿಸುವುದು ಮತ್ತು ರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಶಾಸಕ ಡಾ. ಎಚ್.ಕೆ.ಪಾಟೀಲ ತಿಳಿಸಿದರು.

ಸಹಾಯಕ ಕಾನೂನು ನೆರವು ಅಭಿರಕ್ಷಕರಾದ ಗುರುರಾಜ ಗೌರಿ ಅವರು ಉಪನ್ಯಾಸ ನೀಡಿ ಮಾತಾಡುತ್ತಾ ಜಗತ್ತಿನಾದ್ಯಂತ ಪ್ರಜಾಪ್ರಭುತ್ವ




ದಿನಾಚರಣೆಯನ್ನು ಆಚರಿಸಲು ನೆಲ್ಸನ್ ಮಂಡೇಲಾ ಅವರನ್ನು ಇಂದು ನಾವು ಸ್ಮರಿಸಬೇಕಾಗಿದೆ. ನೆಲ್ಸನ್ ಮಂಡೇಲಾ ಅವರು ಪ್ರಜಾಪ್ರಭುತ್ವ ದಿನಾಚರಣೆಗೆ ಶ್ರಮಿಸಿದವರಾಗಿದ್ದಾರೆ. ಪ್ರಜಾಪ್ರಭುತ್ವವು ಕೇವಲ ಆಡಳಿತವಲ್ಲ. ಇದೊಂದು ಜೀವನ ಶೈಲಿಯಾಗಿದೆ. ಪ್ರಜಾಪ್ರಭುತ್ವ ಮೇಲ್ನೋಟಕ್ಕೆ ಅಲ್ಲದೇ ಅದನ್ನು ಅನುಭವಿಸಬೇಕು. ದೇಶದ ಪ್ರಗತಿಗೆ ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಅದ್ಭುತ ಪ್ರತಿಭೆಯನ್ನು ನಾವು ಇವತ್ತಿನ ದಿವಸ ಸ್ಮರಿಸಬೇಕಾಗಿದೆ. constitution debate ಪುಸ್ತಕಗಳನ್ನು ಪ್ರತಿಯೊಬ್ಬರೂ ಓದಬೇಕು. ಕಾಯ್ದೆಗಳ ಪೂರ್ಣ ಅನುಷ್ಟಾನವಾಗಬೇಕು. ಅವುಗಳ ದುರುಪಯೋಗವಾಗಬಾರದು ಎಂದು ತಿಳಿಸುತ್ತಾ ಶಾಲಾ ವಿದ್ಯಾರ್ಥಿಗಳಿಗೆ ಶಾಸಕರಾಗಿ ಆಯ್ಕೆಯಾದ ಮೇಲೆ ವಿಧಾನಸಭೆಯಲ್ಲಿ ಮಾಡಬೇಕಾದ ( concept )ಪರಿಕಲ್ಪನೆಗಳ ಕುರಿತು ವಿವರವಾಗಿ ತಿಳಿಸಿಕೊಟ್ಟರು.

ಇದೇ ಸಂದರ್ಭದಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆಯ ಭಿತ್ತಿಪತ್ರ ಬಿಡುಗಡೆಗೊಳಿಸಲಾಯಿತು.

ಷರೀಫ್ ಬಿಳಿಎಲಿ ಹಾಗೂ ಸಂಗಡಿಗರು ಸಂವಿಧಾನದ ಕುರಿತು ಗೀತೆಗಳನ್ನು ಪ್ರಸ್ತುತಪಡಿಸಿದರು. ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಭಾರತದ ಸಂವಿಧಾನದ ಪ್ರಸ್ತಾವನೆ ಬೋಧಿಸಿದರು.

ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಮಿಥುನ್ ಎಚ್.ಎನ್, ಆರ್.ಡಿ.ಪಿ.ಆರ್ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ಅಮರೇಶ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ. ಪಲ್ಲೇದ, ಎಸ್.ಎನ್. ಬಳ್ಳಾರಿ, ಆದಪ್ಪನವರ, ಬಸವರಾಜ ಕಡೆಮನಿ, ಆನಂದ ಸಿಂಗಾಡೆ, ಮಾರ್ತಾಂಡ ಹಾದಿಮನಿ, ಪ್ರೊ.ಕೆ.ಎಚ್. ಬೇಲೂರ ಸೇರಿದಂತೆ ಜಿಲ್ಲಾ ಜಾಗೃತ ಸಮಿತಿಯ ನಾಮನಿರ್ದೇಶಿತ ಸದಸ್ಯರು, ನಗರಸಭೆ ಸದಸ್ಯರು, ಸಫಾಯಿ ಕರ್ಮಚಾರಿ ನಾಮನಿರ್ದೇಶಿತ ಸದಸ್ಯರು, ವಿವಿಧ ಇಲಾಖೆಯ ಅಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು ಹಾಜರಿದ್ದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಸರ್ವರನ್ನು ಸ್ವಾಗತಿಸಿದರು. ಪ್ರೊ. ಬಾಬಹುಬಲಿ ಜೈನರ್ ಹಾಗೂ ನಂದಿತಾ ಹಂಪಿಹೊಳಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮಕ್ಕೂ ಮುನ್ನ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕುರಿತು ಬಿಡಿಸಿದ ರಂಗೋಲಿ ಎಲ್ಲರ ಕಣ್ಮನ ಸೆಳೆಯಿತು.

# ಕಾಂಗ್ರೆಸ್‌ನಲ್ಲಿ ಕಳೆ ಬೆಳೆದಿದೆ, 'ಮುಡಾ' ದೂರು ಕೊಟ್ಟಿದ್ದೇ ಕೈ ನಾಯಕರು: ಮಾಜಿ ಸಚಿವ ರಾಜಣ್ಣ

**ಸತ್ಯಮಿಥ್ಯ ಸುದ್ದಿಮೂಲ ಬೆಂಗಳೂರು:**
ಮಾಜಿ ಸಿಎಂ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ದೂರು ಕೊಟ್ಟಿದ್ದೇ ಕಾಂಗ್ರೆಸ್‌ನವರು ಹಾಗೂ ಜಾರಿ ನಿರ್ದೇಶನಾಲಯಕ್ಕೆ (ಇಡಿ) ಮಾಹಿತಿ ನೀಡಿದ್ದೂ ಕೂಡ ಕಾಂಗ್ರೆಸ್‌ನವರೇ ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಪರೋಕ್ಷವಾಗಿ ಪಕ್ಷದ ಆಂತರಿಕ ಭಿನ್ನಾಭಿಪ್ರಾಯವನ್ನು ಬಹಿರಂಗಪಡಿಸಿದ್ದಾರೆ.



ಬೆಂಗಳೂರಿನಲ್ಲಿ ಮಂಗಳವಾರ ಮಾತನಾಡಿದ ಅವರು, "ರಾಜಕೀಯದಲ್ಲಿ ಗಿಡದ ಸುತ್ತ ಕಳೆ ಬೆಳೆಯುವಂತಹ ಪರಿಸ್ಥಿತಿ ಬಂದಿದೆ. ಹೀಗಾಗಿ ಇಡಿಗೆ ಕಾಂಗ್ರೆಸ್‌ನವರೇ ಮಾಹಿತಿ ನೀಡಿದ್ದಾರೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದನ್ನು ನಾನು ಸಂಪೂರ್ಣವಾಗಿ ನಂಬುತ್ತೇನೆ. ಅಧಿಕಾರ ಎನ್ನುವುದು ವಿಷವಾಗಿದೆ" ಎಂದು ಹೇಳುವ ಮೂಲಕ ಸ್ವಪಕ್ಷೀಯರ ವಿರುದ್ಧವೇ ವಾಗ್ದಾಳಿ ನಡೆಸಿದರು.

**ಮುಂದಿನ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಲ್ಲ!**
ಇದೇ ವೇಳೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹಾಗೂ ಎಂಎಲ್‌ಸಿ ಬಿ.ಕೆ. ಹರಿಪ್ರಸಾದ್ ಅವರನ್ನು ಭೇಟಿ ಮಾಡಿದ್ದ ಕೆ.ಎನ್. ರಾಜಣ್ಣ, ಈ ಭೇಟಿ ಕೇವಲ ಲೋಕಾಭಿರಾಮ ಚರ್ಚೆಯಷ್ಟೇ ಎಂದಿದ್ದಾರೆ.

"ನಮ್ಮ ಜಿಲ್ಲೆಯಲ್ಲಿ ಪಕ್ಷ ಸಂಘಟನೆ ಮಾಡುವ ಬಗ್ಗೆ ಹಾಗೂ 2028ರ ವಿಧಾನಸಭೆ ಚುನಾವಣೆ ಕುರಿತು ಚರ್ಚಿಸಿದ್ದೇವೆ. ಮುಂದಿನ ದಿನಗಳಲ್ಲಿ ಲೋಕಸಭಾ ಚುನಾವಣೆಗೆ ನಿಲ್ಲುತ್ತೇನೆ, ಆದ-ರೆ ವಿಧಾನಸಭೆಗೆ ಸ್ಪರ್ಧಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದೇನೆ. ನನ್ನ ಈ ನಿರ್ಧಾರಕ್ಕೆ ಅವರು ಕೂಡ ಸಹಮತ ವ್ಯಕ್ತಪಡಿಸಿದ್ದಾರೆ. ಅಲ್ಲದೆ 35 ಬೋರ್ಡ್ ಮತ್ತು ಕಾರ್ಪೊರೇಷನ್‌ಗಳಿಗೆ ಅಧ್ಯಕ್ಷರನ್ನು ನೇಮಕ ಮಾಡಲಾಗಿದ್ದು, ಅದರಲ್ಲಿ ಒಬ್ಬೇ ಒಬ್ಬ ಮಹಿಳೆಗೂ ಅಧ್ಯಕ್ಷ ಸ್ಥಾನ ನೀಡಿಲ್ಲ. ಈ ಬಗ್ಗೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಹಾಗೂ ಕೆ.ಸಿ. ವೇಣುಗೋಪಾಲ್ ಅವರೊಂದಿಗೆ ಚರ್ಚಿಸುವಂತೆ ತಿಳಿಸಿದ್ದೇನೆ" ಎಂದು ರಾಜಣ್ಣ ವಿವರಿಸಿದರು.

**ಇಂದು ಸಚಿವರ ಜೊತೆ ಹೈಕಮಾಂಡ್ ನಾಯಕರ ಮಹತ್ವದ ಸಭೆ:** ರಾಜ್ಯದಲ್ಲಿ ನಡೆಯುತ್ತಿರುವ ದಿಢೀರ್ ರಾಜಕೀಯ ಬೆಳವಣಿಗೆಗಳ ಬೆನ್ನಲ್ಲೇ ಎಐಸಿಸಿ ನಾಯಕರು ಬೆಂಗಳೂರಿಗೆ ಆಗಮಿಸುತ್ತಿದ್ದಾರೆ. ಮಂಗಳವಾರ ರಾತ್ರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಹಾಗೂ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ರಾಜಧಾನಿಗೆ ತಲುಪಲಿದ್ದಾರೆ.

ಬುಧವಾರ ಸಚಿವರೊಂದಿಗೆ ಕೆ.ಸಿ. ವೇಣುಗೋಪಾಲ್ ಮತ್ತು ಸುರ್ಜೇವಾಲಾ ಪ್ರತ್ಯೇಕ ಸಭೆ ನಡೆಸಲಿದ್ದು, ಪಕ್ಷ ಸಂಘಟನೆ ಮತ್ತು ಸರ್ಕಾರದ ವರ್ಚಸ್ಸು ಹೆಚ್ಚಿಸಲು ಸಚಿವರು ಪರಿಣಾಮಕಾರಿಯಾಗಿ ಕೆಲಸ ಮಾಡುವಂತೆ ಕಿವಿಮಾತು ಹೇಳುವ ಸಾಧ್ಯತೆಯಿದೆ.

# ಗಡಚಿಂತಿ ಗ್ರಾಮದಲ್ಲಿ ಶ್ರಾವಣ ಮಾಸದ ಭಜನಾ ಮುಕ್ತಾಯ ಸಮಾರಂಭ

**ಸತ್ಯಮಿಥ್ಯ ಸುದ್ದಿಮೂಲ ಹನಮಸಾಗರ**
ಸಮೀಪದ ಗಡಚಿಂತಿ ಗ್ರಾಮದಲ್ಲಿ ಶ್ರಾವಣ ಮಾಸದ ಪ್ರಯುಕ್ತ ಒಂದು ತಿಂಗಳಿನಿಂದ ನಿರಂತರವಾಗಿ ನಡೆಯುತ್ತಿದ್ದ ಭಜನಾ ಕಾರ್ಯಕ್ರಮವು ಭಕ್ತಿಭಾವದಿಂದ ಮುಕ್ತಾಯಗೊಂಡಿತು.

ಶ್ರೀ ಮಾರುತೇಶ್ವರ ಭಜನಾ ಮಂಡಳಿಯ ವತಿಯಿಂದ ಒಂದು ತಿಂಗಳ ಕಾಲ ಗ್ರಾಮದಲ್ಲಿ ಪ್ರತಿದಿನ ಭಜನೆ, ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರಲಾಗಿತ್ತು. ಇದರ ಅಂಗವಾಗಿ ನಿನ್ನೆ ಸಾಯಂಕಾಲ ಭಜನಾ ಮುಕ್ತಾಯ ಸಮಾರಂಭ ನಡೆಯಿತು.

ಇಂದು ಮುಂಜಾನೆ ಗ್ರಾಮದಲ್ಲಿ ಶ್ರೀ ಶರಣಬಸವೇಶ್ವರರ ಭಾವಚಿತ್ರದೊಂದಿಗೆ ವಿಶೇಷ ಪೂಜಾ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಶ್ರೀ ಶಿವಲಿಂಗಯ್ಯ ಅವರು ಧಾರ್ಮಿಕ ವಿಚಾರಗಳನ್ನು ತಿಳಿಸಿ, ಭಜನೆ ಹಾಗೂ ಸತ್ಸಂಗದಿಂದ ಗ್ರಾಮದಲ್ಲಿ ಶಾಂತಿ, ಭಕ್ತಿ ಮತ್ತು ಒಗ್ಗಟ್ಟು ಹೆಚ್ಚುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವೆಂಕಟೇಶ ಕಬ್ಬರಗಿ, ಮಹಾಂತೇಶ ಹಿರೇಮಠ, ಪರಸಪ್ಪ ಬೀಳಗಿ, ಯಮನೂರಪ್ಪ ವಾಲಿಕಾರ, ವಸಂತ ಬಿಳಗಿ, ಮುತ್ತಪ್ಪ ಗುಡ್ಡದ, ಮಹಾಂತೇಶ ಕೊಪ್ಪಳ ಸೇರಿದಂತೆ ಭಜನಾ ಮಂಡಳಿಯ ಭಕ್ತರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

ಒಂದು ತಿಂಗಳ ಕಾಲ ಭಕ್ತಿಭಾವದಿಂದ ಭಜನಾ ಕಾರ್ಯಕ್ರಮ ನಡೆಸಿದ ಶ್ರೀ ಮಾರುತೇಶ್ವರ ಭಜನಾ ಮಂಡಳಿಯ ಕಾರ್ಯಕ್ಕೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು.



# ಬೆಂಗಳೂರಿನಲ್ಲಿ ಭಾರಿ ಮಳೆ, ಸಂಚಾರದಲ್ಲಿ ನಲುಗಿದ ಸವಾರರು

**ಬೆಂಗಳೂರು:** ಕಳೆದ ಎರಡ್ಮೂರು ದಿನಗಳಿಂದ ಬಿಸಿಲಿನ ಧಗೆಯಿಂದ ಕಂಗೆಟ್ಟಿದ್ದ ರಾಜಧಾನಿ ಬೆಂಗಳೂರಿನ ಜನತೆಗೆ ಮಳೆರಾಯ ತಂಪೆರದಿದ್ದು, ಹಲವು ಕಡೆ ಮಂಗಳವಾರ ಬಿರುಗಾಳಿ ಸಹಿತ ಧಾರಾಕಾರ ಮಳೆಯಾಗಿದೆ.

ಇಂದು ಸಂಜೆ 6 ಗಂಟೆಯ ಸುಮಾರಿಗೆ ಆರಂಭವಾದಮಳೆ7ಗಂಟೆಯವರೆಗೂ ಸುರಿದಿದ್ದು, ಕಚೇರಿಯಿಂದ ಮನೆಗೆ ತೆರಳುತ್ತಿದ್ದ ವಾಹನ ಸವಾರರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಬೆಂಗಳೂರಿನ ಶಾಂತಿನಗರ, ಕಲಾಸಿಪಾಳ್ಯ, ಸಿಟಿ ಮಾರ್ಕೆಟ್, ಜಯನಗರ, ವಿಲ್ಸನ್ ಗಾರ್ಡನ್, ಎಂಜಿ ರಸ್ತೆ, ವಿವೇಕ ನಗರ, ಕೋರಮಂಗಲ, ಎಚ್.ಎಸ್.ಆರ್ ಲೇಔಟ್, ಬೆಳ್ಳಂದೂರು, ವರ್ತೂರು, ಸರ್ಜಾಪುರ, ವೈಟ್ ಫೀಲ್ಡ್, ಕೆ.ಆರ್.ಪುರಂ ಸೇರಿದಂತೆ ನಗರದ ಹಲವೆಡೆ ಭಾರೀ ಮಳೆಯಾಗಿದೆ.

ಭಾರೀ ಮಳೆಯಿಂದ ಹಲವು ಕಡೆ ಅವಾಂತರಗಳು ಸೃಷ್ಟಿಯಾಗಿದ್ದು, ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದ್ದರಿಂದ ವಾಹನ ಸವಾರರು ತೀವ್ರ ತೊಂದರೆ ಅನುಭವಿಸಿದರು.

**ಕೆಆರ್‌ಸರ್ಕಲ್‌ಅಂಡರ್‌ಪಾಸ್‌ಕ್ಲೋಸ್:** ಭಾರೀ ಮಳೆಯಿಂದಾಗಿ ಮುನ್ನೆಚ್ಚರಿಕಾ ಕ್ರಮವಾಗಿ ಕೆ ಆರ್ ಸರ್ಕಲ್ ಅಂಡರ್ ಪಾಸ್ ಕ್ಲೋಸ್ ಮಾಡಲಾಗಿದೆ. ಸಣ್ಣ ಮಳೆಗೂ ಕೆ ಆರ್ ಸರ್ಕಲ್ ಅಂಡರ್ ಪಾಸ್ ಜಲಾವೃತವಾಗುತ್ತೆ. ಹೀಗಾಗಿ ಪೊಲೀಸರು ಬ್ಯಾರಿಕೇಡ್ ಹಾಕಿ ಅಂಡರ್ ಪಾಸ್ ಬಂದ್ ಮಾಡಿದ್ದಾರೆ.

## 69ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನ:

# ದಕ್ಷಿಣ ಆಫ್ರಿಕಾ ಸಂಸತ್ತಿಗೆ ಕರ್ನಾಟಕ ಕುರಿತ ಕಿರುಹೊತ್ತಿಗೆ ಅರ್ಪಿಸಿದ ನಿಯೋಗ

**ಸತ್ಯಮಿಥ್ಯ ನ್ಯೂಸ್ ಡೆಸ್ಕ್ :**
ಕೇಪ್ ಟೌನ್‌ನಲ್ಲಿ ನಡೆಯುತ್ತಿರುವ 69ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನಮಂಡಲದ ನಿಯೋಗವು ದಕ್ಷಿಣ ಆಫ್ರಿಕಾ ಗಣರಾಜ್ಯದ ರಾಷ್ಟ್ರೀಯ ಸಭೆಯ ಸಭಾಧ್ಯಕ್ಷರಾದ ಥೋಕೊ ದಿದಿಜಾ ಅವರಿಗೆ ೦ ಃಡಿಂಛಿಣಡಿಜ ಊಟ ಏಚಿಡಿಟಿಚಿಣಚಿಞಚಿ " ಎಂಬ ವಿಶೇಷ ಕಿರುಹೊತ್ತಿಗೆಯನ್ನು ಅರ್ಪಿಸಿತು.

ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಜಿ.ಎಸ್. ಪಾಟೀಲರವರು ಪ್ರತಿನಿಧಿಯಾಗಿ ( ಆಜಟಜ-ರಚಿಣಜ) ಹಾಗೂ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಯವರಾದ ಸಲೀಂ ಅಹಮದ್‌ರವರು ವೀಕ್ಷಕರಾಗಿ (ಔಛಿಜಡಿತಜಡಿ ) ಒಳಗೊಂಡ ನಿಯೋಗವು ಕೇಪ್ ಟೌನ್ ಅಂತರರಾಷ್ಟ್ರೀಯ ಸಮಾವೇಶ ಕೇಂದ್ರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಈ ಕಿರುಹೊತ್ತಿಗೆಯನ್ನು ಹಸ್ತಾಂತರಿಸಲಾಯಿತು.




ಕರ್ನಾಟಕದ ಸಂಸದೀಯ ಪರಂಪರೆ, ಆಡಳಿತ ವ್ಯವಸ್ಥೆ, ಸಾಂಸ್ಕೃತಿಕ ವೈಭವ ಹಾಗೂ ಅಭಿವೃದ್ಧಿ ಸಾಧನೆಗಳನ್ನು ಅಂತರರಾಷ್ಟ್ರೀಯ ನಿಯೋಗಗಳಿಗೆ ಪರಿಚಯಿಸುವ ಉದ್ದೇಶದಿಂದ ಕಿರುಹೊತ್ತಿಗೆಯನ್ನು ಸಿದ್ಧಪಡಿಸಲಾಗಿದೆ. ಕರ್ನಾಟಕ ವಿಧಾನಮಂಡಲದ ಪರವಾಗಿ ಇದನ್ನು ಸಂಸದೀಯ ಸ್ನೇಹ ಮತ್ತು ಸೌಹಾರ್ದದ ಸಂಕೇತವಾಗಿ ಅರ್ಪಿಸಲಾಯಿತು.

ದಕ್ಷಿಣ ಆಫ್ರಿಕಾದ ಕೇಪ್ ಟೌನ್‌ನಲ್ಲಿ ನಡೆಯುತ್ತಿರುವ ಸಮ್ಮೇಳನವು "ಬದಲಾಗುತ್ತಿರುವ ವಿಶ್ವ ವ್ಯವಸ್ಥೆಯಲ್ಲಿ ಅಂತರರಾಷ್ಟ್ರೀಯ ಕಾನೂನು ಮತ್ತು ಸಂಸದೀಯ ಪ್ರಜಾಪ್ರಭುತ್ವವನ್ನುಬಲಪಡಿಸುವುದು:ಕಾಮನ್‌ವೆಲ್ತ್ ನಾಯಕತ್ವ" ಎಂಬ ಧ್ಯೇಯದಡಿ ನಡೆಯುತ್ತಿದೆ.

ಕಾಮನ್‌ವೆಲ್ತ್ನ ಒಂಬತ್ತು ಭೌಗೋಳಿಕ ಪ್ರದೇಶಗಳಿಂದ ಸಭಾಧ್ಯಕ್ಷರು, ಸಭಾಪತಿಗಳು ಹಾಗೂ ಸಂಸದರು ಸೇರಿದಂತೆ 800ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದು, ಇದು ಕಾಮನ್‌ವೆಲ್ತ್ ಸಮ್ಮೇಳನದ ಇತಿಹಾಸದಲ್ಲೇ ಇದೊಂದು ಅತಿ-ದೊಡ್ಡ ಸಮಾವೇಶವಾಗಿದೆ. ಕರ್ನಾಟಕ ನಿಯೋಗವು ಶಾಸಕಾಂಗದಲ್ಲಿ ಅಂತರ್ ಸಂಸದೀಯ, ಆರ್ಥಿಕತೆ, ವ್ಯಾಪಾರ, ಕೃತಕ ಬುದ್ಧಿ ಮತ್ತೆ ಬಳಕೆ,. ಮಾನವ ಹಕ್ಕುಗಳು ಮತ್ತು ಶಾಂತಿ, ಹಾಗೂ ಹವಾಮಾನ ಬದಲಾವಣೆ ಮತ್ತು ಸ್ಥಿತಿಸ್ಥಾಪಕತ್ವದಲ್ಲಿ ಸಂಸದೀಯ ನಾಯಕತ್ವ ಕುರಿತ ಚರ್ಚೆ ಸೇರಿದಂತೆ ಸಮ್ಮೇಳನದ ಗೋಷ್ಠಿ ಮತ್ತು ಕಾರ್ಯಾಗಾರಗಳಲ್ಲಿ ಭಾಗವಹಿಸಲಾಯಿತು.

# ಓಂ ಶ್ರೀ ಸಾಯಿ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾ ಮಟ್ಟಕ್ಕೆ ಆಯ್ಕೆ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ನಗರದಲ್ಲಿ ನಡೆದ ರೋಣ ತಾಲೂಕು ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಕೊಡಗಾನೂರಿನ ಓಂ ಶ್ರೀ ಸಾಯಿ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಪ್ರದರ್ಶನ ನೀಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.



ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಸಂಸ್ಥೆಯ ವಿದ್ಯಾರ್ಥಿಗಳಾದ ವಿಶ್ವಾರಾಧ್ಯ ಹಿರೇಮಠ, ಸಮರ್ಥ ಸಂಕನೂರ ಹಾಗೂ ತಸ್ಲೀಮಾ ಉಟಗೂರ ಅವರು ವಿಜೇತರಾಗಿ ಜಿಲ್ಲಾ ಮಟ್ಟಕ್ಕೆ ಅರ್ಹತೆ ಪಡೆದುಕೊಂಡಿದ್ದಾರೆ.

ಗದಗದಲ್ಲಿ ನಡೆದ ಜಿಲ್ಲಾ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಇದೇ ಶಾಲೆಯ ವಿದ್ಯಾರ್ಥಿನಿ ಶ್ರೇಯಾ ಅಂಗಡಿ ಅವರು ತೃತೀಯ ಸ್ಥಾನವನ್ನು ಪಡೆದು ಸಾಧನೆಗೆ ಪಾತ್ರರಾಗಿದ್ದಾರೆ.

ಅತ್ಯುತ್ತಮ ಪ್ರದರ್ಶನ ನೀಡಿ ಮುಂದಿನ ಹಂತಕ್ಕೆ ಆಯ್ಕೆಯಾಗಿರುವ ಹಾಗೂ ಪ್ರಶಸ್ತಿ ಗೆದ್ದ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷರಾದ ಆನಂದ ಮಂತ್ರಿ, ಕಾರ್ಯದರ್ಶಿ ಕೃಷ್ಣಾ ಮಂತ್ರಿ, ಮುಖ್ಯೋಪಾಧ್ಯಾಯರಾದ ಸತೀಶ ದಳವಿ ಹಾಗೂಾಲೆಯ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ ಶುಭ ಹಾರೈಸಿದ್ದಾರೆ.



ನರಗುಂದ ಶಾಸಕರಾದ ಸಿ.ಸಿ. ಪಾಟೀಲ ಅವರ ನಿವಾಸದಲ್ಲಿ ವಿಘ್ನೇಶ್ವರನಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

SATYAMITHI KANNADA DAILY MORNING OWNER, PUBLISHER, BY: CHANNAVEERAPPA NINGAPPA SAMAGANDI PUBLISHED FROM: KELAGAL{ETH, NEAR BASAVESHWAR DEVASTAN, HOME NO. 169, WARD NO, 4 MAIN ROAD GAJEDRAGAD, GADAG KARNATAKA - 582114 PRINTED AT: MAILARALINGESHWAR PRINTERS, WARD NO, 3, SUDI TQ, GAJENDRAGAD, GADAG, KARNATAKA- 582114